ಲಿವರ್ ಸಮಸ್ಯೆ ಇರುವ ಮಗುವಿನ ಚಿಕಿತ್ಸೆಗೆ ಸಚ್ಚಿದಾನಂದ ನೆರವು

• **ಕನ್ನಡಪ್ರಭ ವಾರ್ತೆ** ಶ್ರೀರಂಗಪಟ್ಟಣ

ಲಿವರ್‌ಸಮಸ್ಯೆಯಿಂದ ಬಳಲುತ್ತಿದ್ದ ಪಟ್ಟಣದ ಕಸಾಬರ ಮಾರಿಗುಡಿ ಬೀದಿ ನಿವಾಸಿ ಮನೋಜ್-ಸಹನಾ ದಂಪತಿಯ ಒಂದು ವರ್ಷದ ಪುತ್ರ ಅನ್ವಿಕ್ ಚಿಕಿತ್ಸಾ ವೆಚ್ಚಕ್ಕಾಗಿ ಬಿಜೆಪಿ ಮುಖಂಡ ಇಂಡುವಾಳು ಎಸ್.ಸಚ್ಚಿದಾನಂದ ವೈಯಕ್ತಿಕ ಆರ್ಥಿಕ ನೆರವು ನೀಡಿದರು. ನಂತರ ಮಾತನಾಡಿದ ಅವರು, ಲಿವರ್ ಸಮಸ್ಯೆಯಿಂದ ಬಳಲುತ್ತಿರುವ ಮಗುವಿನ ಚಿಕಿತ್ಸೆಗೆ ಸಂಘ, ಸಂಸ್ಥೆಗಳು ಉದಾರವಾಗಿ ನೆರವು ನೀಡಬೇಕು. ಅನ್ವಿಕ್ ಪೋಷಕರು ಆರ್ಥಿಕ ಸಂಕಷ್ಟದಲ್ಲಿದ್ದಾರೆ. ಮಗುವಿನ ಚಿಕಿತ್ಸೆಗೆ ಈಗಾಗಲೇ ಲಕ್ಷಾಂತರ ರು. ಹಣ ಖರ್ಚು ಮಾಡಿದ್ದಾರೆ. ಪ್ರಧಾನಮಂತ್ರಿ ಪರಿಹಾರ ನಿಧಿಯಿಂದ ನೆರವು ಕೊಡಿಸಲು ಪ್ರಯತ್ನಿಸುತ್ತೇನೆ ಎಂದರು. ಈ ವೇಳೆ ಬಿಜೆಪಿ ನಗರ ಘಟಕದ ಅಧ್ಯಕ್ಷ ಜಿ.ಈ.ಸುಧಾಕರ್, ಪುರಸಭೆ ಮಾಜಿ ಸದಸ್ಯರಾದ ಗಂಜಾಂ ಶಿವು, ಎಂ. ಶ್ರೀನಿವಾಸ್, ರಾಜೇಂದ್ರ, ಕೆ.ಆರ್. ಸೊಸೈಟಿ ಮಾಜಿ ಅಧ್ಯಕ್ಷ ಎಸ್. ರಘು, ಮುಖಂಡರಾದ ಉಮೇಶ್ ಕುಮಾರ್, ಹೇಮಂತ ಕುಮಾರ್, ಕಿರಣ್ ಸಿಂಗ್ ಇತರರು ಇದ್ದರು.



ಹಲಗೂರಿನ ವಿವಿಧ ಶಾಲೆಗಳಲ್ಲಿ ವ್ಯಾಸಂಗ ಮಾಡಿ ಎಸ್ಸೆಸ್ಸೆಲ್ಸಿ ಮತ್ತು ಪಿಯುಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಾದ ವೈ.ಎಸ್.ಪದ್ಮಶ್ರೀ, ಮಾನಸ, ಪ್ರಿಯಾಂಕ, ಚಂದು ಶ್ರೀ, ಸಿಂಧುಶ್ರೀ, ಪ್ರೀತಮ್, ಜ್ಞಾನೇಶ ಅವರನ್ನು ಡಿ.ಆರ್.ಗುರು-ಶಿಷ್ಯರ ಬಳಗದಿಂದ ಅಭಿನಂದಿಸಲಾಯಿತು.



ಶ್ರೀರಂಗಪಟ್ಟಣದ ನಿವಾಸಿ ಮನೋಜ್-ಸಹನಾ ದಂಪತಿಯ ಒಂದು ವರ್ಷದ ಪುತ್ರ ಅನ್ವಿಕ್ ಲಿವರ್ ಸಮಸ್ಯೆಯಿಂದ ಬಳಲುತ್ತಿರುವ ಹಿನ್ನೆಲೆಯಲ್ಲಿ ಚಿಕಿತ್ಸಾ ವೆಚ್ಚಕ್ಕಾಗಿ ಬಿಜೆಪಿ ಮುಖಂಡ ಇಂಡುವಾಳು ಎಸ್. ಸಚ್ಚಿದಾನಂದ ವೈಯಕ್ತಿಕ ಆರ್ಥಿಕ ನೆರವು ನೀಡಿದರು.

ಗರಿಷ್ಠ 34°C | ಕನಿಷ್ಠ 23°C

ಸುದ್ದಿ ಸಿಂಚನ

ದುರಾಡಳಿತಕ್ಕೆ ಜನರ ತಕ್ಕ ಪಾಠ: ಸಿ.ಪಿ.ಉಮೇಶ್

ಮಂಡ್ಯ: ಪಶ್ಚಿಮ ಬಂಗಾಳ, ಪುದುಚೇರಿ ಹಾಗೂ ಅಸ್ಸಾಂ ರಾಜ್ಯದ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿಗೆ ಸ್ಪಷ್ಟ ಬಹುಮತವನ್ನು ಜನರು ನೀಡಿದ್ದಾರೆ. ಈ ಮೂಲಕ ದೇಶದ ರಕ್ಷಣೆ ಹಾಗೂ ಅಭಿವೃದ್ಧಿ ಪ್ರಧಾನ ಮಂತ್ರಿ ನರೇಂದ್ರ ಮೋದಿ ನೇತೃತ್ವದ ಸರ್ಕಾರದಿಂದಷ್ಟೇ ಸಾಧ್ಯ ಎನ್ನುವ ಸಂದೇಶವನ್ನು ವಿರೋಧ ಪಕ್ಷಗಳಿಗೆ ಜನತೆ ರವಾನಿಸಿದ್ದಾರೆ ಎಂದು ಎಂಡಿಸಿಸಿ ಬ್ಯಾಂಕ್



ಮಾಜಿ ಅಧ್ಯಕ್ಷ ಸಿ.ಪಿ. ಉಮೇಶ್ ತಿಳಿಸಿದ್ದಾರೆ. ಪಂಚ ರಾಜ್ಯದಲ್ಲಿ ಚುನಾವಣೆ ನಡೆಯುತ್ತಿದ್ದರೂ ದೇಶದ ಎಲ್ಲರ ಗಮನ ಪಶ್ಚಿಮ ಬಂಗಾಳದತ್ತ ಇತ್ತು. ಮಮತಾ ಬ್ಯಾನರ್ಜಿ ಅವರ ದುರಾಡಳಿತದಿಂದ ಜನರು ರೋಸಿ ಹೋಗಿದ್ದರು. ಮಾತ್ರವಲ್ಲದೆ ಪ್ರಶ್ಚಿಮ ಬಂಗಾಳ ಅಕ್ರಮ ಬಾಂಗ್ಲಾ ವಲಸಿಗರ ತಾಣವಾಗಿತ್ತು. ಪ್ರತಿದಿನ ದೌರ್ಜನ್ಯ ಮಿತಿ ಮೀರಿದ್ದವು. ಇದಕ್ಕೆಲ್ಲ ಅಲ್ಲಿನ ಮತದಾರರು ತಕ್ಕ ಪಾಠ ಕಳಿಸಿದ್ದಾರೆ. ಇದು ದೇಶದ ಗಮನಸೆಳೆದಿದೆ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಪಶ್ಚಿಮ ಬಂಗಾಳ, ಪುದುಚೇರಿ ಹಾಗೂ ಅಸ್ಸಾಂ ಚುನಾವಣಾ ಫಲಿತಾಂಶ 2028ರಲ್ಲಿ ನಡೆಯಲಿರುವ ಕರ್ನಾಟಕ ರಾಜ್ಯದ ಚುನಾವಣೆಗೂ ದಿಕ್ಸೂಚಿಯಾಗಿದೆ. ಇಲ್ಲಿನ ಕಾಂಗ್ರೆಸ್ ಸರ್ಕಾರದ ಭ್ರಷ್ಟಾಚಾರದ ಆಡಳಿತಕ್ಕೆ ಜನರ ಬೇಸತ್ತಿದ್ದಾರೆ. ಅಭಿವೃದ್ಧಿ ಮರೆತು ಕಾಲಹರಣ ಮಾಡುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಕರ್ನಾಟಕದಲ್ಲಿಯೂ ಕಾಂಗ್ರೆಸ್‌ಗೆ ಸೋಲು ಕಟ್ಟಿಟ್ಟ ಬುತ್ತಿ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಕ್ರಮ ಮದ್ಯ ವಶ

ಹಲಗೂರು: ಅಕ್ರಮ ಮದ್ಯ ಮಾರಾಟ ಮಾಡುತ್ತಿದ್ದ ಅಂಗಡಿಗಳ ಮೇಲೆ ಭಾನುವಾರ ದಾಳಿ ಮಾಡಿದ ಹಲಗೂರು ಪೊಲೀಸರು ಸುಮಾರು 10 ಸಾವಿರ ರು.



ಮೌಲ್ಯದ 16 ಲೀಟರ್ ಅಕ್ರಮ ಮದ್ಯವನ್ನು ವಶಪಡಿಸಿಕೊಂಡಿದ್ದಾರೆ. ಸಮೀಪದ ಮುತ್ತತ್ತಿ ಗ್ರಾಮದ ಅಂಗಡಿಗಳಲ್ಲಿ ಅಕ್ರಮವಾಗಿ ಮಾರಾಟ ಮಾಡಲಾಗುತ್ತಿದೆ ಎಂಬ ದೂರು ಬಂದ ಹಿನ್ನೆಲೆಯಲ್ಲಿ ಮಾಹಿತಿ ಪಡೆದ ಹಲಗೂರು ಪೊಲೀಸ್ ಸಬ್ ಇನ್ಸ್‌ಪೆಕ್ಟರ್‌ಲೋಕೇಶ್ ಮತ್ತು ಸಿಬ್ಬಂದಿ ಚೌಡೇಗೌಡ ಅಂಗಡಿ ಮೇಲೆ ದಾಳಿ ಮಾಡಿ ಅಂಗಡಿಯಲ್ಲಿ ಅಕ್ರಮವಾಗಿ ಮಾರಾಟ ಮಾಡಲು ಶೇಖರಿಸಿ ಇಟ್ಟಿದ್ದ 16 ಲೀಟರ್‌ಮದ್ಯ ವಶಪಡಿಸಿಕೊಂಡಿದ್ದಾರೆ. ಈ ಸಂಬಂಧ ಹಲಗೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಜೂಜು: 7 ಮಂದಿ ಬಂಧನ

ಹಲಗೂರು: ಸಮೀಪದ ಹುಲ್ಲಹಳ್ಳಿ ಹೊರವಲಯದ ನಾಲೆ ಏರಿ ಮೇಲೆ ಜೂಜಾಟದಲ್ಲಿ ತೊಡಗಿದ್ದ 7 ಮಂದಿಯನ್ನು ಬಂಧಿಸಿರುವ ಪೊಲೀಸರು 66,600 ರು. ನಗದು ವಶಪಡಿಸಿಕೊಂಡಿದ್ದಾರೆ. ಭಾನುವಾರ ರಾತ್ರಿ ಗಸ್ತಿನಲ್ಲಿದ್ದಾಗ ಖಚಿತ ಮಾಹಿತಿ ಆಧರಿಸಿದ ಹಲಗೂರು ಪಿಎಸ್‌ಐ ಲೋಕೇಶ್ ಸಿಬ್ಬಂದಿಗಳೊಂದಿಗೆ ದಾಳಿ ಮಾಡಿ ಜೂಜುಕೋರರನ್ನು ವಶಕ್ಕೆ ಪಡೆದು ಪ್ರಕರಣ ದಾಖಲಿಸಿ ಜಾಮೀನಿನ ಮೇಲೆ ಬಿಡುಗಡೆ ಮಾಡಲಾಯಿತು. ಜೂಜಾಟ ಆಡುವುದನ್ನು ಸಂಪೂರ್ಣ ನಿಷೇಧ ಮಾಡಲಾಗಿದೆ. ಜೂಜುಕೋರರ ಬಗ್ಗೆ ಮಾಹಿತಿ ಸಿಕ್ಕಲ್ಲಿ ನಿರ್ದಾಕ್ಷಿಣ್ಯವಾಗಿ ಪ್ರಕರಣ ದಾಖಲಿಸಲಾಗುವುದು ಎಂದು ಹಲಗೂರು ಪಿಎಸ್‌ಐ ಲೋಕೇಶ ತಿಳಿಸಿದ್ದಾರೆ.

ಕೃಷ್ಣರಾಜಸಾಗರ ಜಲಾಶಯ ನೀರಿನ ಮಟ್ಟ	
ಗರಿಷ್ಠ ಮಟ್ಟ	124.80 ಅಡಿ
ಇಂದಿನ ಮಟ್ಟ	92.28 ಅಡಿ
ಒಳಹರಿವು	99 ಕ್ಯುಸೆಕ್
ಹೊರಹರಿವು	1493 ಕ್ಯುಸೆಕ್
ನೀರಿನ ಸಂಗ್ರಹ	17.343 ಟಿಎಂಸಿ

ಇಂದಿನಿಂದ ಶ್ರೀಕಾಲಭೈರವೇಶ್ವರಸ್ವಾಮಿ ದೇವಸ್ಥಾನ ಉದ್ಘಾಟನೆ

ಶ್ರೀಕಾಲಭೈರವೇಶ್ವರ, ಶ್ರೀವೆಂಕಟೇಶ್ವರ, ಶ್ರೀರಾಮ ಒಂದೆಡೆ ನೆಲೆ | ಹಿಂದೂ ದೇಗುಲದಲ್ಲಿ ಜೈನ ದೇವರ ಪೂಜೆಗೂ ಅವಕಾಶ: ಶ್ರೀಪುರುಷೋತ್ತಮಾನಂದನಾಥ ಸ್ವಾಮೀಜಿ

• **ಕನ್ನಡಪ್ರಭ ವಾರ್ತೆ** ಮಂಡ್ಯ

ನಗರದ ಬಂದೀಗೌಡ ಬಡಾವಣೆಯಲ್ಲಿ ಆದಿ ಚುಂಚನಗಿರಿ ಮಹಾಸಂಸ್ಥಾನ ಮಠದಿಂದ ಶ್ರೀಕಾಲಭೈರವೇಶ್ವರ ಸ್ವಾಮಿ ದೇವಾಳಯದ ಕುಂಭಾಭಿಷೇಕ ಮತ್ತು ಲೋಕಾರ್ಪಣೆ ಸಮಾರಂಭ ಮೇ 5 ರಿಂದ ಮೇ 7ರವರೆಗೆ ನಡೆಯಲಿದೆ ಎಂದು ಆದಿ ಚುಂಚನಗಿರಿ ಶಿಕ್ಷಣ ಟ್ರಸ್ಟ್‌ನ ಪ್ರಧಾನ ಕಾರ್ಯದರ್ಶಿ ಶ್ರೀಪುರುಷೋತ್ತಮಾನಂದನಾಥ ಸ್ವಾಮೀಜಿ ಹೇಳಿದರು.

ಮಂಗಳವಾರ ಸಂಜೆ 4 ಗಂಟೆಗೆ ಗಣಪತಿ ಹೋಮ, ವಾಸ್ತುಹೋಮ, ದೇವಾಲಯ ಪ್ರವೇಶ ನಡೆಯಲಿದೆ. ಬುಧವಾರ ಬೆಳಗ್ಗೆ ಯಾಗಶಾಲಾ ಪ್ರವೇಶ ಮತ್ತು ಹೋಮ, ಪೂರ್ಣಾಹುತಿ ನಡೆಯಲಿದೆ. ಸಂಜೆ 4 ಗಂಟೆಗೆ ಸತ್ಸಂತ ಮತ್ತು ದಾನಿಗಳಿಗೆ ಸನ್ಮಾನ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ದೇಗುಲದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಮೇ 7ರಂದು ಬೆಳಗ್ಗೆ 10 ಗಂಟೆಗೆ ಶ್ರೀ ಆದಿ ಚುಂಚನಗಿರಿ ಶ್ರೀ ಆದಿ ಚುಂಚನಗಿರಿ ಮಹಾಸಂಸ್ಥಾನಮಠದ ಪೀಠಾಧ್ಯಕ್ಷ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ದಿವ್ಯಸಾನಿಧ್ಯದಲ್ಲಿ, ಆದಿ ಚುಂಚನಗಿರಿ ಶಿಕ್ಷಣ ಟ್ರಸ್ಟ್ ಪ್ರಧಾನ ಕಾರ್ಯದರ್ಶಿ ಶ್ರೀ ಪುರುಷೋತ್ತಮಾನಂದನಾಥ ಸ್ವಾಮೀಜಿ ದಿವ್ಯ ಉಪಸ್ಥಿತಿಯಲ್ಲಿ ಲೋಕಾರ್ಪಣಾ ಸಮಾರಂಭ ನಡೆಯಲಿದೆ ಎಂದರು. ವಿಶ್ವ ಒಕ್ಕಲಿಗರ ಮಹಾ ಸಂಸ್ಥಾನಮಠದ ಶ್ರೀನಿಶ್ಚಲಾನಂದನಾಥ ಸ್ವಾಮೀಜಿ, ಬೆಂಗಳೂರು ಶ್ರೀಕೈಲಾಸಾಶ್ರಮದ ಶ್ರೀ ಜಯೇಂದ್ರಪುರಿ ಸ್ವಾಮೀಜಿ, ದಾವಣಗೆರೆ ರಾಣೆಬೆನ್ನೂರಿನ ಐರಣಿ ಹೊಳೆ ಮಠದ ಶ್ರೀ ಬಸವರಾಜೇಂದ್ರ ಸ್ವಾಮೀಜಿ, ಬೆಂಗಳೂರು ಓಂಕಾರಾಶ್ರಮದ ಶ್ರೀ ಮಧುಸೂಧನಾನಂದಪುರಿ ಸ್ವಾಮೀಜಿ, ಕೆ.ಆರ್. ನಗರ ಕಾಗಿಲೆನೆಪೀಠದ ಶ್ರೀ ಶಿವಾನಂದಪುರಿ ಸ್ವಾಮೀಜಿ, ನೆಲಮಂಗಲ ಶ್ರೀ ಶನಿಮಹಾತ್ಮ ದೇವಸ್ಥಾನದ ಶ್ರೀಹನುಮಂತಪ್ಪ ಸ್ವಾಮಿ, ಚಿತ್ರದುರ್ಗದ ಶ್ರೀ ಕಬೀರಾನಂದ ಆಶ್ರಮದ ಶ್ರೀ ಶಿವಲಿಂಗಾನಂದ ಸ್ವಾಮೀಜಿ, ಆದಿಚುಂಚನಗಿರಿ ಮಠದ ಪ್ರಧಾನ ಕಾರ್ಯದರ್ಶಿ ಪ್ರಸನ್ನನಾಥ ಶ್ರೀಗಳು ಪಾಲ್ಗೊಳ್ಳುವರು.



ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ, ಕೃಷಿ ಮತ್ತು ಜಿಲ್ಲಾ ಉಸ್ತುವಾರಿ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ, ವಿಧಾನಸಭೆ, ವಿಧಾನಪರಿಷತ್ ಶಾಸಕರು, ಮಾಜಿ ಶಾಸಕರು ಹಾಗೂ ಇನ್ನಿತರ ಗಣ್ಯರು ಪಾಲ್ಗೊಳ್ಳುವರು.

ಶ್ರೀ ಕಾಲಭೈರವೇಶ್ವರ ಸ್ವಾಮಿ, ಶ್ರೀ ಚಂದ್ರಮೌಳೇಶ್ವರ ಸ್ವಾಮಿ, ಶ್ರೀ ಭ್ರಮರಾಂಬಿಕೆ, ಶ್ರೀ ವೆಂಕಟೇಶ್ವರ ಸ್ವಾಮಿ, ಶ್ರೀರಾಮ ಪರಿವಾರ, ಶ್ರೀ ಗಣಪತಿ, ಶ್ರೀಸುಬ್ರಹ್ಮಣ್ಯಸ್ವಾಮಿ, ನವಗ್ರಹಗಳನ್ನು ಪ್ರತಿಷ್ಠಾಪಿಸಲಾಗಿದೆ. ಮತ್ತೊಂದು ವಿಶೇಷವೆಂದರೆ ಇದೇ ದೇವಾಲಯದಲ್ಲಿ ಜೈನ ದೇವರ ರಾಮ್ ದೇವರ ಪೂಜೆಗೂ ಅವಕಾಶ ಕಲ್ಪಿಸಲಾಗಿದೆ.

ಸುಮಾರು 3 ಕೋಟಿ ರು. ವೆಚ್ಚದಲ್ಲಿ ದೇಗುಲವನ್ನು ದ್ರಾವಿಡ ಶೈಲಿಯಲ್ಲಿ ನಿರ್ಮಿಸಲಾಗಿದೆ. ಇದರಲ್ಲಿ 1.5 ಕೋಟಿ ರು. ಹಣವನ್ನು ದಾನಿಗಳು ಉಳಿದ 1.5 ಕೋಟಿ ರು. ಹಣವನ್ನು ಮಠದಿಂದ ಭರಿಸಲಾಗಿದೆ. ದೇಗುಲದ ಕೆಳಭಾಗದಲ್ಲಿ ಯೋಗ ಮತ್ತು ಧ್ಯಾನಕೇಂದ್ರವನ್ನು ನಿರ್ಮಿಸಲಾಗಿದೆ. ಮಂಗಳವಾರ ಮತ್ತು ಬುಧವಾರ ರಾತ್ರಿ ಹಾಗೂ ಗುರುವಾರ ಬೆಳಗ್ಗೆ ಮತ್ತು ಮಧ್ಯಾಹ್ನ ಸೇರಿ ಒಟ್ಟು ಎಂಟು ಸಾವಿರ ಭಕ್ತರಿಗೆ ಪಿಇಟಿ ಟ್ರಸ್ಟ್ ಅಧ್ಯಕ್ಷ ಕೆ.ಎಸ್.ವಿಜಯ್ ಆನಂದ್ ಅನ್ನಸಂತರ್ಪಣೆಯ ಜವಾಬ್ದಾರಿಯನ್ನು ವಹಿಸಿಕೊಂಡಿದ್ದಾರೆ ಎಂದರು. ಗೋಷ್ಠಿಯಲ್ಲಿ ಚಂದ್ರಶೇಖರ್, ಜಯರಾಂ, ರವಿಶಂಕರ್, ಅಂಜನಾ, ಎಲ್.ಕೃಷ್ಣ ಇದ್ದರು.

ಬಿಜೆಪಿಯಿಂದ ವಿಜಯೋತ್ಸವ, ಸಿಹಿ ವಿತರಣೆ

ಪಶ್ಚಿಮ ಬಂಗಾಳ, ಅಸ್ಸಾಂ, ಪುದುಚೇರಿಯಲ್ಲಿ ಅರಳಿದ ಕಮಲ | ಕಾರ್ಯಕರ್ತರಿಂದ ಸಂಭ್ರಮಾಚರಣೆ

• **ಕನ್ನಡಪ್ರಭ ವಾರ್ತೆ** ಮಂಡ್ಯ

ಪಂಚರಾಜ್ಯ ಚುನಾವಣೆಫಲಿತಾಂಶದಲ್ಲಿ ಪಶ್ಚಿಮಬಂಗಾಳ, ಅಸ್ಸಾಂ, ಪುದುಚೇರಿ ರಾಜ್ಯಗಳಲ್ಲಿ ಭಾರತೀಯ ಜನತಾ ಪಕ್ಷ ಜಯಭೇರಿ ಬಾರಿಸಿದ ಹಿನ್ನೆಲೆಯಲ್ಲಿ ಕಾರ್ಯಕರ್ತರು ನಗರದಲ್ಲಿ ವಿಜಯೋತ್ಸವ ಆಚರಿಸಿ, ಸಾರ್ವಜನಿಕರಿಗೆ ಸಿಹಿ ವಿತರಿಸಿದರು.

ನಗರದ ಜಯಚಾಮರಾಜೇಂದ್ರ ಒಡೆಯರ್‌ವೃತ್ತದಲ್ಲಿ ಬಿಜೆಪಿ ಕಾರ್ಯಕರ್ತರು ಸಂಭ್ರಮೋತ್ಸವ ಆಚರಿಸಿ ಪ್ರಧಾನಿ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಪರ ಘೋಷಣೆ ಕೂಗಿದರು.

ಬಿಜೆಪಿ ರಾಜ್ಯ ಕಾರ್ಯಕಾರಣಿ ಮಂಡಳಿ ಸದಸ್ಯ ಡಾ.ಸಿದ್ದರಾಮಯ್ಯ ಮಾತನಾಡಿ, ಹದಿನೈದು ವರ್ಷಗಳಿಂದ ಪಶ್ಚಿಮ ಬಂಗಾಳದಲ್ಲಿ ನೆಲೆಯೂರಿದ್ದ ಮಮತಾ ಬ್ಯಾನರ್ಜಿಯ ಜನವಿರೋಧಿ ಸರ್ಕಾರವನ್ನು ಕಿತ್ತೊಗೆಯುವಲ್ಲಿ ಬಿಜೆಪಿ ಯಶಸ್ವಿಯಾಗಿದೆ. ಆ ರಾಜ್ಯದ ಜನರು ಆಡಳಿತದಲ್ಲಿ ಹೊಸ ಬದಲಾವಣೆಯನ್ನು ಬಯಸಿ ಬಿಜೆಪಿಗೆ ಬಹುಮತ ನೀಡಿದ್ದಾರೆ. ಜನಪರ ಆಡಳಿತಕ್ಕಾಗಿ ಬಿಜೆಪಿ ಕೈಹಿಡಿದಿರುವುದಕ್ಕೆ ಹರ್ಷ ವ್ಯಕ್ತಪಡಿಸಿದರು.



ಜಯಚಾಮರಾಜೇಂದ್ರ ಒಡೆಯರ್‌ವೃತ್ತದಲ್ಲಿ ಬಿಜೆಪಿ ಕಾರ್ಯಕರ್ತರು ಪಂಚರಾಜ್ಯ ಚುನಾವಣೆಯಲ್ಲಿ ಮೂರು ರಾಜ್ಯ ಬಿಜೆಪಿ ಗೆಲುವು ಸಾಧಿಸಿರುವುದಕ್ಕೆ ವಿಜಯೋತ್ಸವ ಆಚರಿಸಿದರು.

ಅಸ್ಸಾಂ, ಪುದುಚೇರಿಯಲ್ಲೂ ಬಿಜೆಪಿಗೆ ಬಹುಮತ ದೊರಕಿದೆ. ಕಾಂಗ್ರೆಸ್ ದೇಶದಲ್ಲಿ ಧೂಳೀಪಟವಾಗುತ್ತಿದೆ. ಅತಿ ಶೀಘ್ರದಲ್ಲೇ ಕಾಂಗ್ರೆಸ್ ಮುಕ್ತ ಭಾರತವಾಗುವುದು ನಿಶ್ಚಿತ. ಮೋದಿ ಪರವಾದ ಅಲೆ ಇನ್ನೂ ದೇಶದಲ್ಲಿ ಗಟ್ಟಿಯಾಗಿ ಉಳಿದಿದೆ. ದೇಶದ ಸುಭದ್ರ ಆಡಳಿತಕ್ಕೆ ಬಿಜೆಪಿ ಅಗತ್ಯವಾಗಿದೆ ಎಂದರು.

ಬಿಜೆಪಿ ಮುಖಂಡ ಎಚ್.ಆರ್.ಅರವಿಂದ್, ಬಹುಮುಖ್ಯವಾಗಿ ಪಶ್ಚಿಮ ಬಂಗಾಳದಲ್ಲಿ 15 ವರ್ಷಗಳ ಮಮತಾ ಬ್ಯಾನರ್ಜಿಯ ದುರಾಡಳಿತವನ್ನು ಅಂತ್ಯಗೊಳಿಸಿ ಬಿಜೆಪಿಗೆ ಬಹುಮತ ದೊರಕಿಸಿಕೊಟ್ಟು ಜನರು ಆಶೀರ್ವಾದ ಮಾಡಿದ್ದಾರೆ. ಪ್ರಧಾನಿ ಮೋದಿ ಮತ್ತು ಗೃಹಸಚಿವರ ಆಡಳಿತ ವೈಖರಿಗೆ ಜನರು ಉತ್ತಮವಾಗಿ ಸ್ಪಂದಿಸಿದ್ದಾರೆ ಎಂದು ನುಡಿದರು.

293 ಸದಸ್ಯ ಬಲದ ವಿಧಾನಸಭೆಗೆ ಬಹುಮತಕ್ಕೆ 148 ಸ್ಥಾನಗಳ ಅಗತ್ಯವಿದೆ. ಆದರೆ, ಈಗಾಗಲೇ ಬಿಜೆಪಿ 180 ಸ್ಥಾನಗಳಲ್ಲಿ ಮುನ್ನಡೆ ಕಾಯ್ದುಕೊಂಡಿದ್ದು, ಸರ್ಕಾರ ರಚಿಸಲು ಸಜ್ಜಾಗುತ್ತಿದೆ ಎಂದರು. ನೆರೆರಾಜ್ಯ ತಮಿಳುನಾಡು ಮತ್ತು ಕೇರ ಳದಲ್ಲಿ ದೊಡ್ಡ ಬದಲಾವಣೆ ಕಂಡುಬಂದಿದ್ದು, ಮುಂದಿನ ಚುನಾವಣೆಯಲ್ಲಿ ಬಿಜೆಪಿ ಗೆಲುವು ಸಾಧಿಸಲಿದೆ ಎಂದರು.

ಇದೇ ಸಂದರ್ಭದಲ್ಲಿ ರೈತಮೋರ್ಚಾ ಕಾರ್ಯದರ್ಶಿ ಎಚ್.ಆರ್.ಅಶೋಕ್ ಕುಮಾರ್, ಮಾಧ್ಯಮ ವಕ್ತಾರ ಸಿ.ಟಿ.ಮಂಜುನಾಥ್, ನಾಗನಂದ್, ನಗರಾಧ್ಯಕ್ಷ ಪ್ರಸನ್ನ ಹೊಸಹಳ್ಳಿ, ರಮೇಶ್ ವಿಶ್ವಕರ್ಮ, ಭೀಮೇಶ್, ಚಾಮರಾಜು, ರಾಶಿಸಿದ್ದರಾಜು, ಶಿವಕುಮಾರ್‌ಆರಾಧ್ಯ, ಹೊಸಹಳ್ಳಿ ಶಿವು, ಯೋಗೇಶ್ ಮತ್ತಿತರರಿದ್ದರು.

ಕಾಂಗ್ರೆಸ್ಸಿಗರಿಂದ ಸಂಭ್ರಮ



• **ಕನ್ನಡಪ್ರಭ ವಾರ್ತೆ** ಮಂಡ್ಯ

ರಾಜ್ಯದಲ್ಲಿ ನಡೆದ ಎರಡು ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಯಲ್ಲಿಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳು ಗೆಲುವು ಸಾಧಿಸಿರುವುದಕ್ಕೆ ಮಂಡ್ಯದ ಕಾಂಗ್ರೆಸ್ ಕಚೇರಿ ಮುಂಭಾಗ ಜಿಲ್ಲಾ ಕಾಂಗ್ರೆಸ್ ಸಮಿತಿಯ ಪದಾಧಿಕಾರಿಗಳು ಸಿಹಿ ವಿತರಿಸಿ ಸಂಭ್ರಮ ಆಚರಿಸಿದರು.

ಮುಡಾ ಅಧ್ಯಕ್ಷ ಬಿ.ಪಿ.ಪ್ರಕಾಶ್ ಮಾತನಾಡಿ, ರಾಜ್ಯದಲ್ಲಿ ಕಾಂಗ್ರೆಸ್ ಬೇರುಗಳು ಗಟ್ಟಿಯಾಗಿರುವುದಕ್ಕೆ ಉಪ ಚುನಾವಣಾ ಫಲಿತಾಂಶ ಸಾಕ್ಷಿಯಾಗಿದೆ. ಸಿದ್ದರಾಮಯ್ಯನವರ ಆಡಳಿತವನ್ನು ಜನರು ಮೆಚ್ಚಿಕೊಂಡಿದ್ದಾರೆ. ದಾವಣಗೆರೆಯಲ್ಲಿ ಬಿಜೆಪಿ ಗೊಂದಲ ಮೂಡಿಸುವ ಪ್ರಯತ್ನ ನಡೆಸಿದರೂ ಅಂತಿಮವಾಗಿ ಕ್ಷೇತ್ರದ ಜನರು ಕಾಂಗ್ರೆಸ್ ಕೈ ಹಿಡಿದಿದ್ದಾರೆ ಎಂದರು.

ಜಿಲ್ಲಾಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಶುಭದಾಯಿನಿ ಮಾತನಾಡಿ,ಕಾಂಗ್ರೆಸ್ ಸರ್ಕಾರದ ಗ್ಯಾರಂಟಿ ಯೋಜನೆಗಳಿಗೆ ಜನರು ಮನಸೋತಿದ್ದಾರೆ. ಇದು2028ರ ಚುನಾವಣೆಗೆ ಇಂದು ನಡೆದ ಉಪಚುನಾವಣೆಯ ದಿಕ್ಸೂಚಿಯಾಗಿದೆ, ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್‌ಅವರ ಜನಪರ ಆಡಳಿತ ಗೆಲುವಿಗೆ ಶ್ರೀರಕ್ಷೆಯಾಗಿದೆ ಎಂದು ಹರ್ಷ ವ್ಯಕ್ತಪಡಿಸಿದರು. ಇದೇ ವೇಳೆ ಕಾಂಗ್ರೆಸ್ ಕಾರ್ಯಕರ್ತರು ಸಿಹಿ ವಿತರಿಸಿ ಪಟಾಕಿ ಸೇರಿಸಿಸಂಭ್ರಮಿಸಿದರುಕಾರ್ಯಕ್ರಮದಲ್ಲಿ ಕಾಂಗ್ರೆಸ್ ಕಾರ್ಯಕರ್ತರಾದ ಅಭಿಲಾಶ್, ಚನ್ನಪ್ಪ, ಗ್ಯಾರೆಂಟಿ ಉದಯ್, ಪಣಕನಳ್ಳಿ ಅರುಣ್ ಮತ್ತಿತರರು ಇದ್ದರು.

ಶ್ರೀರಂಗಪಟ್ಟಣ: ಬಿಜೆಪಿ ಕಾರ್ಯಕರ್ತರ ಸಂಭ್ರಮಾಚರಣೆ

• **ಕನ್ನಡಪ್ರಭ ವಾರ್ತೆ** ಶ್ರೀರಂಗಪಟ್ಟಣ

ಪ್ರಧಾನಿ ಮೋದಿ ಅವರ ನಾಯಕತ್ವದ ಮೇಲೆ ಅಸ್ಸಾಂ, ಪಶ್ಚಿಮ ಬಂಗಾಳ ಮತ್ತು ಪುದುಚೇರಿ ಮತದಾರರು ವಿಶ್ವಾಸವಿಟ್ಟು ಚುನಾವಣೆಯಲ್ಲಿ ಬಿಜೆಪಿಗೆ ಅಭೂತಪೂರ್ವ ಬೆಂಬಲ ನೀಡಿದ್ದಾರೆ ಎಂದು ಬಿಜೆಪಿ ಮುಖಂಡ ಇಂಡವಾಳು ಸಚ್ಚಿದಾನಂದ ಹೇಳಿದರು.

ಪಟ್ಟಣದ ಬಿಜೆಪಿ ಕಚೇರಿಯಲ್ಲಿ ಮೂರು ರಾಜ್ಯಗಳಲ್ಲಿ ಬಿಜೆಪಿ ಜಯಭೇರಿ ಹಿನ್ನಲೆ ಕಾರ್ಯಕರ್ತರೊಂದಿಗೆ ಸಂಭ್ರಮಾಚರಣೆ ನಡೆಸಿ, ಪ್ರಧಾನಿ ಮೋದಿ ಹಾಗೂ ಅಮಿತ್ ಶಾ ಪರ ಜಯ ಘೋಷಗಳ ಕೂಗಿದರು.

ಈ ವೇಳೆ ಮಾತನಾಡಿದ ಅವರು, ದೇಶಾದ್ಯಂತ ಕಾಂಗ್ರೆಸ್‌ನ ದುರಾಡಳಿತದಿಂದಬೇಸತ್ತಿರುವಜನರುಬದಲಾವಣೆಯತ್ತ ಮುಖ ಮಾಡುತಿದ್ದಾರೆ. ಚುನಾವಣೆ ವೇಳೆ ಮತದಾರರಿಗೆ ಇನ್ನಿಲ್ಲದ ಭರವಸೆಗಳನ್ನು ನೀಡಿ ಗೆದ್ದ ಬಳಿಕ ಮತದಾರರನ್ನು ಮರೆತ ಕಾಂಗ್ರೆಸ್ ಪಕ್ಷಕ್ಕೆ ಜನರು ಸರಿಯಾದ ಪಾಠ ಕಲಿಸುತ್ತಾರೆ ಎನ್ನುವುದಕ್ಕೆ ಇಂದಿನ ಚುನಾವಣಾ ಫಲಿತಾಂಶವೇ ಸಾಕ್ಷಿಯಾಗಿದೆ ಎಂದರು.



ಮುಂದಿನ ದಿನಗಳಲ್ಲಿ ಈ ಫಲಿತಾಂಶ ನಮ್ಮ ರಾಜ್ಯದಲ್ಲೂ ಮರುಕಳಿಸಲಿದೆ. ಪ್ರಧಾನಿ ಮೋದಿ ಅವರ ದೂರದೃಷ್ಟಿನಾಯಕತ್ವ ಹಾಗೂ ಉತ್ತಮ ಆಡಳಿತಕ್ಕೆ ಜನರ ಬೆಂಬಲ ಸಿಕ್ಕಿದೆ. ಈ ಮೂಲಕ ಬಿಜೆಪಿ ಮೇಲೆಜನರುವಿಶ್ವಾಸಹೊಂದಿರುವುದನ್ನು ತೋರಿಸಿದಂತಾಗಿದೆ ಎಂದರು.

ಕಳೆದ ಮೂರು ವರ್ಷದಲ್ಲಿ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಉತ್ತಮ ಆಡಳಿತ ಕೊಡುವಲ್ಲಿ ಸಂಪೂರ್ಣ ವಿಫಲವಾಗಿದೆ. ಬಿಜೆಪಿ ಸರ್ಕಾರದ ಅವಧಿಯಲ್ಲಿ ಜಾರಿಗೆ ತಂದಿದ್ದ ಹತ್ತಾರು ಜನಪರ ಯೋಜನೆ ನಿಲ್ಲಿಸುವ ಮೂಲಕ ಜನ ವಿರೋಧಿ ನೀತಿ ತೋರಿದೆ. ಆದರೂ ತಾವು ಉತ್ತಮ ಆಡಳಿತ ಕೊಡುತ್ತಿದ್ದೇವೆಂದು ತಮ್ಮ ಬೆನ್ನನ್ನು ತಾವೇ ತಟ್ಟಿಕೊಳ್ಳುತ್ತಿದ್ದಾರೆ. ಇದಕ್ಕೆ ಮುಂದಿನ ದಿನದಲ್ಲಿ ರಾಜ್ಯದ ಜನರು ಪಾಠ ಕಲಿಸಲಿದ್ದಾರೆ ಎಂದರು.

ಈ ವೇಳೆ ರಾಜ್ಯ ಬಿಜೆಪಿ ಕಾರ್ಯಕಾರಿಣಿ ಸದಸ್ಯ ಡಾ. ಸಿದ್ದರಾಮಯ್ಯ, ರೈತ ಮೋರ್ಚಾ ರಾಜ್ಯ ಉಪಾಧ್ಯಕ್ಷ ಕೆ.ಎಸ್. ನಂಜುಂಡೇಗೌಡ, ಜಿಲ್ಲಾ ಬಿಜೆಪಿ ಪ್ರದಾನ ಕಾರ್ಯದರ್ಶಿ ಟಿ.ಶ್ರೀಧರ್, ತಾಲೂಕು ಬಿಜೆಪಿ ಅಧ್ಯಕ್ಷ ಪೀಹಳ್ಳಿ ರಮೇಶ್, ನಗರ ಬಿಜೆಪಿ ಅಧ್ಯಕ್ಷ ಸುಧಾಕರ್, ಮುಖಂಡರಾದ, ಉರ್ಮೇಶ್ ಕುಮಾರ್, ಶಾಮಿಯಾನ ಪುಟ್ಟರಾಜು, ಪುಟ್ಟರಾಮು, ಮಂಜುನಾಥ್, ಪಾಲಹಳ್ಳಿ ಸುಕೇಶ್, ಗಂಜಾಂ ಶಿವು, ಹೇಮಂತ್ ಕುಮಾರ, ಕಿರಣ್ ಸಿಂಗ್, ಅಭಿ, ಜಯಲಕ್ಷ್ಮಮ್ಮ, ಕುಮಾರ, ಚಂದ್ರಶೇಖರ್, ರಾಜೇಶ್, ಚೇತನ್ ಸೇರಿದಂತೆಇತರಬಿಜೆಪಿಕಾರ್ಯಕರ್ತರು ಹಾಜರಿದ್ದರು.

'ದುರ್ಬಲರನ್ನು ಮೇಲೆತ್ತಬೇಕು'



ಕಿಕ್ಕೇರಿ: ಆರ್ಥಿಕವಾಗಿ ದುರ್ಬಲರಾದವರನ್ನು ಮೇಲೆತ್ತಿ ಮುಖ್ಯವಾಹಿನಿಗೆ ತರುವ ಕೆಲಸವನ್ನು ಧರ್ಮಸ್ಥಳ ಸಂಸ್ಥೆ ಮಾಡುತ್ತಿದೆ ಎಂದು ತಾಲೂಕು ಯೋಜನಾಧಿಕಾರಿ ಬಿ.ಶ್ರೀನಿವಾಸಗೌಡ ತಿಳಿಸಿದರು.

ತಾಲೂಕು ಯೋಜನಾಧಿಕಾರಿಯಾಗಿ ನಿರ್ಗಮಿತ ಪ್ರಸಾದ್ ಅವರಿಂದ ಅಧಿಕಾರ ಸ್ವೀಕರಿಸಿ ಮಾತನಾಡಿ, ಮೊದಲು ದಾವಣಗೆರೆಯಲ್ಲಿ ಅಧಿಕಾರಿಯಾಗಿ ಸೇವೆ ಸಲ್ಲಿಸಿದ್ದು, ಮಂಡ್ಯ ಜಿಲ್ಲೆಯಲ್ಲಿ ಸೇವೆ ಸಲ್ಲಿಸುವ ಅವಕಾಶ ಲಭಿಸಿದೆ ಎಂದರು. ನಿರ್ಗಮಿತ ತಾಲೂಕು ಯೋಜನಾಧಿಕಾರಿ ಪ್ರಸಾದ್, ಹಣಕಾಸು ಪ್ರಬಂಧಕ ಚಾಮರಾಜ, ಆಡಳಿತ ಪ್ರಬಂಧಕ ರಾಘವೇಂದ್ರ, ವಿಚಕ್ಷಣಾಧಿಕಾರಿ ಶಶಿಕುಮಾರ್, ಮೇಲ್ವಿಚಾರಕಿ ನಂದಿನಿ, ಶರತ್, ಕಿರಣ್ ಹಾಜರಿದ್ದರು.

ಬೆಳ್ಳಿಹಬ್ಬ | ಜನರೊಂದಿಗೆ ಜನತಾದಳ ಕಾರ್ಯಕ್ರಮ ಹಿನ್ನೆಲೆ ಪೂರ್ವಭಾವಿ ಸಭೆ

ಜೆಡಿಎಸ್ ನಾಯಕರಿಂದ ಗ್ರಾಮಸಭೆ

• **ಕನ್ನಡಪ್ರಭ ವಾರ್ತೆ** ಪಾಂಡವಪುರ

ಎಚ್.ಡಿ.ಕುಮಾರಸ್ವಾಮಿ ಅವರು ತಮ್ಮ ಅಧಿಕಾರ ಅವಧಿಯಲ್ಲಿ ಕೊಟ್ಟಂತಹ ಜನಪರ, ರೈತಪರ ಯೋಜನೆಗಳು, ಬ್ಯಾಂಕ್ ಸಾಲಮನ್ನಾ ನಾಡಿನ ರೈತರ ಬದುಕಿಗೆ ನೆರವಾಗಿವೆ ಎಂದು ಜಿಪಂ ಮಾಜಿ ಸದಸ್ಯ ಸಿ.ಅಶೋಕ್ ಹೇಳಿದರು.



ತಾಲೂಕಿನ ಬನ್ನಂಗಾಡಿ ಮತ್ತು ಡಿಂಕಾ ಗ್ರಾಪಂ ವ್ಯಾಪ್ತಿಯ ಗ್ರಾಮಗಳಮೇ7ರಂದುನಡೆಯುವಜನರೊಂದಿಗೆ ಜನತಾದಳ ಮತ್ತು ಜೆಡಿಎಸ್ ಪಕ್ಷದ 25ನೇ ವರ್ಷದ ಬೆಳ್ಳಿಹಬ್ಬ ಕಾರ್ಯಕ್ರಮದ ಹಿನ್ನೆಲೆಯಲ್ಲಿ ಪಕ್ಷದ ಮುಖಂಡರು, ಕಾರ್ಯಕರ್ತರ ಸಭೆ ನಡೆಸಿ ಮಾತನಾಡಿದರು.

ಎಚ್.ಡಿ.ಕುಮಾರಸ್ವಾಮಿ ಅವರದ್ದು ತಾಯಿಹೃದಯ ಹೊಂದಿರುವ ಜನನಾಯಕ. ಅವರ ಅಧಿಕಾರಕ್ಕೆ ಬಂದಾಗಲೆಲ್ಲ ಬಡವರು, ರೈತರು, ಶೋಷಿತರ ಜನಪರವಾದ ಯೋಜನೆಗಳನ್ನು ಜಾರಿಗೆ ತಂದು ಕೆಲಸ ಮಾಡಿದ್ದಾರೆ. ರೈತರು ಸಂಕಷ್ಟದಲ್ಲಿ ಇದ್ದಾಗ ರೈತರ ಸಾಲಮನ್ನಾ ಮಾಡಿ ಅವರ ಕಷ್ಟಕ್ಕೆ ನೆರವಾಗಿದ್ದಾರೆ ಎಂದರು.

ಈಗ ಕೇಂದ್ರ ಸಚಿವರಾಗಿ ಕೇಂದ್ರ, ರಾಜ್ಯದಲ್ಲಿ ಉತ್ತಮಕೆಲಸ ಮಾಡುತ್ತಿದ್ದಾರೆ, ಜಿಲ್ಲೆಗೆ ಹಲವು ಕೈಗಾರಿಕೆಗಳನ್ನು ತರಲು ಸಾಕಷ್ಟು ಪ್ರಯತ್ನಗಳನ್ನು ನಡೆಸುತ್ತಿದ್ದಾರೆ. ಮುಂದಿನ ದಿನಗಳಲ್ಲಿ ಮತ್ತೊಮ್ಮೆ ಅವರನ್ನು ನಾಡಿನ ಮುಖ್ಯಮಂತ್ರಿ ಮಾಡಲು ರಾಜ್ಯದ ಜನತೆ ಕಾತುರದಿಂದ ಕಾಯುತ್ತಿದ್ದಾರೆ ಎಂದರು.

ಮೇ 7ರಂದು ಮೇಲುಕೋಟೆ ವಿಧಾನಸಭಾ ಕ್ಷೇತ್ರದಲ್ಲಿ ನಿಖಿಲ್ ಕುಮಾರಸ್ವಾಮಿ ಹಾಗೂ ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ನೇತೃತ್ವದಲ್ಲಿ ಜನರೊಂದಿಗೆ ಜನತಾದಳ ಹಾಗೂ ಜೆಡಿಎಸ್ ಪಕ್ಷದ ಬೆಳ್ಳಿಹಬ್ಬದ ಸಮಾರಂಭ ಆಯೋಜಿಸಲಾಗಿದೆ. ಜಿಲ್ಲಾ ಎಲ್ಲಾ ತಾಲೂಕುಗಳಲ್ಲೂ ಈ ಕಾರ್ಯಕ್ರಮ ಮುಗಿದೆ. ನಿಖಿಲ್ ಕುಮಾರಸ್ವಾಮಿ ಅವರು ಪಕ್ಷ ಸಂಘಟನೆ ಮಾಡುವ ಕೆಲಸ ಮಾಡುತ್ತಿದ್ದಾರೆ. ಕ್ಷೇತ್ರದ ಪಕ್ಷದ ಮುಖಂಡರು, ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುವ ಮೂಲಕ ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

ಸಭೆಯಲ್ಲಿ ಬನ್ನಂಗಾಡಿ ಹಾಗೂ ಡಿಂಕಾ ಗ್ರಾಪಂ ವ್ಯಾಪ್ತಿಯ ಜೆಡಿಎಸ್ ಪಕ್ಷದ ಮುಖಂಡರು, ಕಾರ್ಯಕರ್ತರು ಹಾಜರಿದ್ದರು.

ಅಭಿವೃದ್ಧಿ ಕಾರ್ಯ | ಶ್ರಮಿಕ ವಸತಿ ಶಾಲೆ ನಿರ್ಮಾಣಕ್ಕೆ ಸಚಿವ ಸಿಆರ್‌ಎಸ್ ಚಾಲನೆ

ಮಕ್ಕಳನ್ನು ದೇಶ ಕಟ್ಟುವ ಶಕ್ತಿಯಾಗಿಸಿ

• **ಕನ್ನಡಪ್ರಭ ವಾರ್ತೆ** ನಾಗಮಂಗಲ

ಗ್ರಾಮೀಣ ಪ್ರದೇಶದ ಬಡ ಕುಟುಂಬಗಳ ಶ್ರಮಿಕರ ಮಕ್ಕಳನ್ನು ವಿದ್ಯಾವಂತರನ್ನಾಗಿಸಿ ದೇಶ ಕಟ್ಟುವ ಶಕ್ತಿಗಳನ್ನಾಗಿ ರೂಪಿಸಲು ಶ್ರಮಿಕ ವಸತಿ ಶಾಲೆ ನಿರ್ಮಿಸಲಾಗುತ್ತಿದೆ ಎಂದು ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ ಹೇಳಿದರು.

ತಾಲೂಕಿನ ಉಯ್ಯನಹಳ್ಳಿ ಹೊರವಲಯದಲ್ಲಿ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ 35 ಕೋಟಿ ರು.ವೆಚ್ಚದ ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಮಕ್ಕಳಿಗಾಗಿ ಶ್ರಮಿಕ ವಸತಿ ಶಾಲಾ ಕಟ್ಟಡ ನಿರ್ಮಾಣ ಕಾಮಗಾರಿಗೆ ಸೋಮವಾರ ಭೂಮಿ ಪೂಜೆ ನೆರವೇರಿಸಿ, ಹಳ್ಳಿಗಾಡಿನ ಎಲ್ಲ ವರ್ಗದ ಮಕ್ಕಳನ್ನು ಶೈಕ್ಷಣಿಕವಾಗಿ ಅಭಿವೃದ್ಧಿ ಪಡಿಸಬೇಕೆಂಬುದು ರಾಜ್ಯ ಸರ್ಕಾರದ ಉದ್ದೇಶವಾಗಿದೆ. ಹಾಗಾಗಿ ಶಿಕ್ಷಣ ಕ್ಷೇತ್ರಕ್ಕೆ ಹೆಚ್ಚು ಒತ್ತು ನೀಡಲಾಗುತ್ತಿದೆ ಎಂದರು.

ತಾಲೂಕಿನಲ್ಲಿ ನಾನು ಶಾಸಕ ಸಚಿವನಾದ ಅವಧಿಯಲ್ಲಿ ಹಲವು ಸರ್ಕಾರಿ ಶಾಲಾ ಕಾಲೇಜುಗಳು, ಬಾಲಕ-ಬಾಲಕಿಯರಿಗೆ ಪ್ರತ್ಯೇಕ ಹಾಸ್ಟೆಲ್‌ಗಳು ಹಾಗೂ ವಿವಿಧ ವಸತಿ ಶಾಲೆಗಳನ್ನು ಮಂಜೂರು ಮಾಡಿಸಿ ಸುಸಜ್ಜಿತವಾದ ಕಟ್ಟಡಗಳನ್ನೂ ಸಹ ನಿರ್ಮಿಸಿರುವುದಾಗಿ ತಿಳಿಸಿದರು.



ತಾಲೂಕು ಸೇರಿದಂತೆ ಜಿಲ್ಲೆಯ ಕಾರ್ಮಿಕರ ಮಕ್ಕಳಿಗಾಗಿಯೇ 7 ಎಕರೆ ವಿಸ್ತೀರ್ಣದಲ್ಲಿ 35 ಕೋಟಿ ರು. ವೆಚ್ಚದಲ್ಲಿ ಸುಸಜ್ಜಿತ ಶ್ರಮಿಕ ವಸತಿ ಶಾಲಾ ಕಟ್ಟಡ ನಿರ್ಮಿಸಲಾಗುತ್ತಿದೆ. ಈ ಶಾಲೆಯಲ್ಲಿ ಅರ್ಹ ಶ್ರಮಿಕರ ಮಕ್ಕಳು 6 ರಿಂದ 10 ನೇ ತರಗತಿ ವರೆಗೆ ವಿದ್ಯಾಭ್ಯಾಸ ಮಾಡಬಹುದಾಗಿದೆ ಎಂದ ಅವರು, ಕಟ್ಟಡ ಕಾಮಗಾರಿ ಉತ್ತಮ ಗುಣಮಟ್ಟದಿಂದ ಕೂಡಿರಬೇಕು. 2 ವರ್ಷದಲ್ಲಿ ಕಾಮಗಾರಿ ಪೂರ್ಣಗೊಳಿಸಿ ಹಸ್ತಾಂತರಿಸಬೇಕೆಂದರು.

ತಹಸೀಲ್ದಾರ್‌ಜಿ.ಆದರ್ಶ, ತಾಪಂ ಇಒ ಸತೀಶ್, ಜಿಲ್ಲಾ ಕಾರ್ಮಿಕ ಅಧಿಕಾರಿ ಡಾ.ಎಂ.ಸವಿತ, ತಾಲೂಕು ಕಾರ್ಮಿಕ ನಿರೀಕ್ಷಕ ಶಿವಕುಮಾರ್, ಎಇಇ ಸಿದ್ದಪ್ಪ, ಮನ್ಮುಲ್ ನಿರ್ದೇಶಕ ಲಕ್ಷ್ಮಿನಾರಾಯಣ, ಸುನಿಲ್‌ಲಕ್ಷ್ಮಿಕಾಂತ್, ನೂತನ್‌ಗೌಡ, ಆರ್.ಕೃಷ್ಣೇಗೌಡ, ಅಲ್ಪಹಳ್ಳಿ ಡಿ.ಕೃಷ್ಣೇಗೌಡ, ಚಿಣ್ಯ ವೆಂಕಟೇಶ್, ಪ್ರಕಾಶ್, ಹನುಮಂತಯ್ಯ, ಹಂದೇನಹಳ್ಳಿ ಮಹದೇವ, ನಿಂಗರಾಜು, ಶಿವಣ್ಣ ಇದ್ದರು.

ಬ್ಯಾಡರಹಳ್ಳಿ ಅಂಕೇಗೌಡ ಆಯ್ಕೆ



ಮದ್ದೂರು: ಸರ್ಕಾರಿ ನೌಕರರ ಸಂಘದ ತಾಲೂಕು ಘಟಕದ ನೂತನ ಅಧ್ಯಕ್ಷರಾಗಿ ಬ್ಯಾಡರಹಳ್ಳಿ ಅಂಕೇಗೌಡ ಅವಿರೋಧವಾಗಿ ಆಯ್ಕೆಯಾದರು.

ಪಟ್ಟಣದ ಸಂಘದ ಕಚೇರಿಯಲ್ಲಿ ಸಂಘದ ಉಳಿದ ಅವಧಿಗೆ ಅಧ್ಯಕ್ಷ ಸ್ಥಾನ, ರಾಜ್ಯ ಪರಿಷತ್ ಸ್ಥಾನ ಹಾಗೂ ಖಜಾಂಚಿ ಸ್ಥಾನಕ್ಕೆ ಚುನಾವಣೆ ನಿಗದಿ ಮಾಡಲಾಗಿತ್ತು. ಅಧ್ಯಕ್ಷ ಸ್ಥಾನಕ್ಕೆ ಪದವಿ ಪೂರ್ವ ಶಿಕ್ಷಣ ಇಲಾಖೆಯ ಅಂಕೇಗೌಡ, ಪರಿಷತ್ ಸ್ಥಾನಕ್ಕೆ ಶಿಕ್ಷಣ ಇಲಾಖೆ ಕೆ.ಮಂಜು ಹಾಗೂ ಖಜಾಂಚಿ ಸ್ಥಾನಕ್ಕೆ ಆರೋಗ್ಯ ಇಲಾಖೆಯ ಎಚ್.ಎಂ. ಮಣಿ ಹೊರತುಪಡಿಸಿ ಬೇರೆ ಯಾರು ನಾಮಪತ್ರ ಸಲ್ಲಿಸದ ಕಾರಣ ಅವಿರೋಧವಾಗಿ ಆಯ್ಕೆ ಮಾಡಲಾಗಿದೆ ಎಂದು ಚುನಾವಣಾ ಅಧಿಕಾರಿಯಾಗಿದ್ದ ಎಸ್.ಶಂಭುಗೌಡ ಘೋಷಣೆಮಾಡಿದರು. ಈವೇಳೆಶಾಸಕಕೆ.ಎಂ.ಉದಯ್‌ಹಾಗೂಪದಾಧಿಕಾರಿಗಳಿಂದ ಅಭಿನಂದನೆ ಸ್ವೀಕರಿಸಿದರು. ತಾಲೂಕು ವ್ಯಾಪ್ತಿಯಲ್ಲಿ ಈಗ ಇರುವ ಸರ್ಕಾರಿ ನೌಕರರ ಭವನವನ್ನು ವಿಸ್ತರಣೆ ಮಾಡಿ ಹೆಚ್ಚುವರಿ ಕಟ್ಟಡ ನಿರ್ಮಾಣ ಮಾಡುವ ಜೊತೆಗೆ ಹೊಸ ಪಿಂಚಣಿ ವ್ಯವಸ್ಥೆಯನ್ನು ರದ್ದುಪಡಿಸಿ ಹಳೆ ಪಿಂಚಣಿ ವ್ಯವಸ್ಥೆ ಮರು ಜಾರಿಗಾಗಿ ಹೋರಾಟ ನಡೆಸಲಾಗುವುದು ಎಂದು ಭರವಸೆ ನೀಡಿದರು. ಈ ವೇಳೆ ರಾಜ್ಯ ಹಿರಿಯ ಉಪಾಧ್ಯಕ್ಷ ಎಸ್. ಶಂಭುಗೌಡ, ಮತ್ತಿತರರು ಇದ್ದರು.

ಕಳೆದ 3 ವರ್ಷದಿಂದ ಜನರ ನಿರೀಕ್ಷೆಗೂ ಮೀರಿ ನಾಗಮಂಗಲ ತಾಲೂಕಿನಲ್ಲಿ ಅಭಿವೃದ್ಧಿ ಕೆಲಸ ಮಾಡುತ್ತಿದ್ದೇನೆ. ಜನರು ಇದನ್ನು ಅರ್ಥೈಸಿಕೊಂಡು ಮುಂಬರುವ ಯಾವುದೇ ಚುನಾವಣೆಗಳಲ್ಲಿ ಅಭಿವೃದ್ಧಿ ಕೆಲಸ ಮಾಡುವ ಇಚ್ಛಾಶಕ್ತಿ ಹಾಗೂ ಜನಪರ ಕಾಳಜಿ ಇರುವ ವ್ಯಕ್ತಿಗಳನ್ನು ಬೆಂಬಲಿಸಿ ಆಶೀರ್ವದಿಸಬೇಕು.

• **ಎನ್.ಚಲುವರಾಯಸ್ವಾಮಿ** ಜಿಲ್ಲಾ ಉಸ್ತುವಾರಿ ಸಚಿವ

ಸುದ್ದಿ ಸಿಂಚನ

ಎಸ್ಸೆಸ್ಸೆಲ್ಸಿ: ವಿವೇಕ ಪ್ರೌಢ ಶಾಲೆ, ಎಂ.ಶ್ರೀನಿವಾಸ್ ಪಬ್ಲಿಕ್ ಸ್ಕೂಲ್‌ಗೆ ಶೇ.100ರಷ್ಟು ಫಲಿತಾಂಶ

ಮಂಡ್ಯ: ತಾಲೂಕು ಹನಕೆರೆಯ ಶ್ರೀನಿವಾಸ್ ವಿವೇಕಾ ವಿದ್ಯಾ ಸಂಸ್ಥೆ, ಎಂ ಎಜುಕೇಷನಲ್ ಅಂಡ್ ಚಾರಿಟೇಬಲ್ ಟ್ರಸ್ಟ್ ಇದರ ಅಂಗ ಸಂಸ್ಥೆಗಳಾದ ವಿವೇಕ ಪ್ರೌಢಶಾಲೆ ಮತ್ತು ಎಂ.ಶ್ರೀನಿವಾಸ್ ಇಂಟರ್‌ನ್ಯಾಷನಲ್ ಪಬ್ಲಿಕ್ ಸ್ಕೂಲ್ 2025-2026ನೇ ಸಾಲಿನ ಎಸ್ಸೆಸ್ಸೆಲ್ಸಿ ವಾರ್ಷಿಕ ಪರೀಕ್ಷೆಯಲ್ಲಿ ಶೇಕಡಾ 100ರಷ್ಟು ಫಲಿತಾಂಶವನ್ನು ಪಡೆಯುವ ಮೂಲಕ ತಮ್ಮದೇ ಆದ ಹೆಗ್ಗಳಿಕೆಯನ್ನು ಹೊಂದಿವೆ. ವಿವೇಕ ಪ್ರೌಢಶಾಲೆಯು ಒಟ್ಟು 28 ವಿದ್ಯಾರ್ಥಿಗಳಲ್ಲಿ ಉನ್ನತ ಶ್ರೇಣಿ 05 ಪ್ರಥಮ ದರ್ಜೆ 16 ದ್ವಿತೀಯ ದರ್ಜೆ- 06 ತೃತೀಯ ದರ್ಜೆ 01 ಶ್ರೇಣಿಯನ್ನು ಮತ್ತು ಎಂ ಶ್ರೀನಿವಾಸ್ ಇಂಟರ್‌ನ್ಯಾಷನಲ್ ಪಬ್ಲಿಕ್ ಸ್ಕೂಲ್ ಯು ಒಟ್ಟು 21 ವಿದ್ಯಾರ್ಥಿಗಳಲ್ಲಿ ಉನ್ನತ ಶ್ರೇಣಿ- 05 ಪ್ರಥಮ ದರ್ಜೆ 08 ದ್ವಿತೀಯ ದರ್ಜೆ- 07 ತೃತೀಯ ದರ್ಜೆ - 01 ಶ್ರೇಣಿಗಳಲ್ಲಿ ವಿದ್ಯಾರ್ಥಿಗಳು ತೇರ್ಗಡೆ ಹೊಂದಿ ಸಂಸ್ಥೆಗೆ ಕೀರ್ತಿಯನ್ನು ತರುವಲ್ಲಿ ಕಾರಣೀ ಭೂತರಾಗಿದ್ದಾರೆ. ಇವರಿಗೆ ಅಧ್ಯಕ್ಷರು, ಆಡಳಿತ ಮಂಡಳಿಯ ಸದಸ್ಯರು, ಪ್ರಾಂಶುಪಾಲರು, ಮುಖ್ಯ ಶಿಕ್ಷಕರು ಮತ್ತು ಶಿಕ್ಷಕ ವೃಂದರು ಅಭಿನಂದಿಸಿದ್ದಾರೆ.

ಬಿಜೆಪಿಯಿಂದ ಪಶ್ಚಿಮ ಬಂಗಾಳಕ್ಕೆ ಹೊಸ ಬೆಳಕು: ಡಾ.ನಿಂಗರಾಜ್‌ಗೌಡ


ಮಂಡ್ಯ: ಕಳೆದ ಹದಿನೈದು ವರ್ಷಗಳಿಂದ ಪಶ್ಚಿಮ ಬಂಗಾಳದ ಟಿಎಂಸಿ ಆಡಳಿತದಲ್ಲಿ ಕವಿದಿದ್ದ ಕತ್ತಲು ದೂರವಾಗಿ ಬಿಜೆಪಿ ಆಡಳಿತ ಜಾರಿಯಾಗುವ ಮೂಲಕ ಹೊಸ ಬೆಳಕು ಮೂಡಿದೆ ಎಂದು ಮೈಸೂರು ವಿಭಾಗದ



ಬಿಜೆಪಿ ಪ್ರಭಾರಿ ಡಾ.ಈ.ಸಿ .ನಿಂಗರಾಜ್‌ಗೌಡ ತಿಳಿಸಿದ್ದಾರೆ. ಪಶ್ಚಿಮ ಬಂಗಾಳದೊಂದಿಗೆ ಅಸ್ಸಾಂ, ಪುದುಚೇರಿಯಲ್ಲೂ ಬಿಜೆಪಿ ಜಯಭೇರಿ ಬಾರಿಸಿದೆ. ಇದರಿಂದ ಕೋಟ್ಯಂತರ ಬಿಜೆಪಿ ಕಾರ್ಯಕರ್ತರ ಕನಸು ನನಸಾಗಿದೆ. ಬಿಜೆಪಿ ಅಲೆ ಪ್ರತಿ ಚುನಾವಣೆಯಲ್ಲೂ ರಾಜ್ಯದಿಂದ ರಾಜ್ಯಕ್ಕೆ ವಿಸ್ತರಿಸುತ್ತಿರುವುದು ಜನಪರ ಆಡಳಿತಕ್ಕೆ ಸಾಕ್ಷಿಯಾಗಿದೆ ಇದಕ್ಕಾಗಿ ಪ್ರಧಾನ ಮಂತ್ರಿ ನರೇಂದ್ರ ಮೋದಿ, ಗೃಹ ಸಚಿವ ಅಮಿತ್ ಶಾ, ಬಿಜೆಪಿಯ ರಾಷ್ಟ್ರೀಯ ಅಧ್ಯಕ್ಷ ನಿತೀನ್ ನಬೀನ್, ರಾಷ್ಟ್ರೀಯ ಸಂಘಟನಾ ಕಾರ್ಯದರ್ಶಿ ಬಿ.ಎಲ್. ಸಂತೋಷ್ ಸೇರಿದಂತೆ ಪಕ್ಷದ ಎಲ್ಲಾ ಮುಖಂಡರಿಗೆ ಅಭಿನಂದನೆ ಸಲ್ಲಿಸಿದ್ದಾರೆ. ಕಳೆದ 50 ವರ್ಷಗಳಿಂದಲೂ ಪಶ್ಚಿಮಬಂಗಾಳದಲ್ಲಿ ಆಗಿನ ಕಮ್ಯೂನಿಷ್ಠರಿಂದ, ಕಳೆದ 15 ವರ್ಷಗಳಿಂದ ಟಿಎಂಸಿ ಕಾರ್ಯಕರ್ತರಿಂದ ಬಿಜೆಪಿ ಮತ್ತು ಸಂಘ ಪರಿವಾರದ ಸಾವಿರಾರು ಕಾರ್ಯಕರ್ತರ ಬರ್ಬರ ಹತ್ಯೆಗಳು ನಿರಂತರವಾಗಿ ನಡೆಯುತ್ತಲೇ ಇದ್ದವು. ಈ ಅಭೂತಪೂರ್ವ ಚುನಾವಣೆಯ ಜಯದಿಂದಾಗಿ ಅವರೆಲ್ಲರ ಆತ್ಮಕ್ಕೆ ಶಾಂತಿ ಸಿಕ್ಕಿದಂತಾಗಿದೆ. ಈ ಚುನಾವಣೆಯ ಜಯದಿಂದಾಗಿ ಪಶ್ಚಿಮಬಂಗಾಳದ ಸಮಗ್ರ ಅಭಿವೃದ್ಧಿ, ಗಡಿ ರಕ್ಷಣೆಯ ಮೂಲಕ ದೇಶದ ಸುರಕ್ಷತೆ, ಮಹಿಳೆಯರ ರಕ್ಷಣೆ, ಯುವಕರಿಗೆ ಉದ್ಯೋಗ, ಪ್ರವಾಸೋದ್ಯಮ, ಕೈಗಾರಿಕಾ ಅಭಿವೃದ್ಧಿಯೂ ನಿಶ್ಚಿತವಾಗಿ ಆಗಲಿದೆ ಎಂದು ಅಚಲ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಬಿ.ಸಿ.ಬೆಟ್ಟೇಗೌಡ ನಿಧನ

ಶ್ರೀರಂಗಪಟ್ಟಣ: ತಾಲೂಕಿನ ಬಲ್ಲೇನಹಳ್ಳಿಯ ಬಿ.ಸಿ ಬೆಟ್ಟೇಗೌಡ (90) ಸೋಮವಾರ ಮುಂಜಾನೆ ವಯೋಸಹಜ ಕಾಯಿಲೆಯಿಂದ ನಿಧನರಾದರು. ಮೃತರು ಮೂವರು ಪುತ್ರರು, ಓರ್ವ ಪುತ್ರಿಯನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ಸೋಮವಾರ ಸಂಜೆ ಸ್ವಗ್ರಾಮದಲ್ಲಿ ನೆರವೇರಿತು.



ಅಪ್ರಾಪ್ತರಿಂದ ಗಾಂಜಾ, ಅಫೀಮು ಸೇವನೆ..!

ಶ್ರೀರಂಗಪಟ್ಟಣದ ಗಂಜಾಂನಲ್ಲಿ ಮಾದಕ ವಸ್ತುಗಳ ರಾಜಾರೋಷ ಮಾರಾಟ | ಲೋಕಾಯುಕ್ತದಿಂದ 13 ಅಧಿಕಾರಿಗಳ ವಿರುದ್ಧ ಸ್ವಯಂ ಪ್ರೇರಿತ ದೂರು ದಾಖಲು

ಸರಬರಾಜುದಾರರಿಂದ ಕಮಿಷನ್ ಪಡೆದು ಕಣ್ಮುಚ್ಚಿ ಕುಳಿತ ಪೊಲೀಸ್ ಇಲಾಖೆ | ಅಧಿಕಾರಿಗಳ ಕರ್ತವ್ಯಲೋಪದ ಬಗ್ಗೆ ಉಪ ಲೋಕಾಯುಕ್ತರಿಂದ ಚಾಟಿ

• **ಕನ್ನಡಪ್ರಭ ವಾರ್ತೆ** ಮಂಡ್ಯ

ಶ್ರೀರಂಗಪಟ್ಟಣ ತಾಲೂಕಿನ ಗಂಜಾಂ ಗ್ರಾಮದಲ್ಲಿ ರಾಜಾರೋಷವಾಗಿ ಮಾದಕ ವಸ್ತುಗಳ ಮಾರಾಟ ನಡೆಯುತ್ತಿದೆ. ಪುಟ್ಟ ಪುಟ್ಟ ಮಕ್ಕಳ ಕೈಯ್ಯಲ್ಲಿ, ಅಪ್ರಾಪ್ತ ವಯಸ್ಸಿನ ಮಕ್ಕಳ ಕೈಯ್ಯಲ್ಲಿ ನಶೆ ಭರಿಸುವಂತಹ ವಸ್ತುಗಳಿವೆ. ಅವುಗಳನ್ನು ಸೇವಿಸುತ್ತಾ ಜೀವನ ಹಾಳು ಮಾಡಿಕೊಳ್ಳುತ್ತಿದ್ದಾರೆ. ಡ್ರಗ್ಸ್ ದೊಡ್ಡ ದಂಧೆಯಾಗಿ ಬೆಳವಣಿಗೆ ಕಾಣುತ್ತಿದ್ದರೂ ಪೊಲೀಸ್ ಇಲಾಖೆ ಸರಬರಾಜುದಾರರಿಂದ ಕಮಿಷನ್ ಪಡೆದು ಕಣ್ಮುಚ್ಚಿ ಕುಳಿತಿದೆ ಎಂದು ಉಪ ಲೋಕಾಯುಕ್ತ ನ್ಯಾಯಮೂರ್ತಿ ಬಿ.ವೀರಪ್ಪ ಕಿಡಿಕಾರಿದ್ದಾರೆ.

ಈ ಮಾದಕವಸ್ತುಗಳ ಪ್ರಕರಣಕ್ಕೆ ಸಂಬಂಧಿಸಿದಂತೆ ಶ್ರೀರಂಗಪಟ್ಟಣ ಪೊಲೀಸ್ ಉಪ ನಿರೀಕ್ಷಕ ಜನಾಬಾಯಿ ಕಡಪಟ್ಟಿ, ಪೊಲೀಸ್ ವೃತ್ತ ನಿರೀಕ್ಷಕ ಬಿ.ಜಿ. ಕುಮಾರ್, ಪೊಲೀಸ್ ಉಪಾಧೀಕ್ಷಕ ಯು.ಡಿ. ಕೃಷ್ಣಕುಮಾರ್, ಶ್ರೀರಂಗಪಟ್ಟಣ ತಹಸೀಲ್ದಾರ್ ಚೇತನಾ ಯಾದವ್, ಪಾಂಡವಪುರ ಉಪವಿಭಾಗಾಧಿಕಾರಿ ಶ್ರೀನಿವಾಸ್, ಜಿಲ್ಲಾ ಆರೋಗ್ಯಾಧಿಕಾರಿ ಡಾ.ಕೆ.ಮೋಹನ್, ತಾಲೂಕು ಆರೋಗ್ಯಾಧಿಕಾರಿ ಎಂ.ಆಶಾಲತಾ, ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕಜಿ.ಎ.ಲೋಕೇಶ್, ಶ್ರೀರಂಗಪಟ್ಟಣ ಕ್ಷೇತ್ರ ಶಿಕ್ಷಣಾಧಿಕಾರಿ ನಂದೀಶ್, ಪದವಿ ಪೂರ್ವ ಶಿಕ್ಷಣ ಇಲಾಖೆ ಉಪ ನಿರ್ದೇಶಕ ಚೆಲುವಯ್ಯ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕಿ ಆಶಾ, ಶ್ರೀರಂಗಪಟ್ಟಣ ಪುರಸಭೆ ಮುಖ್ಯಾಧಿಕಾರಿ ರಾಜಣ್ಣ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ಸಕಾಲೇಶ್ ಸೇರಿ 13 ಅಧಿಕಾರಿಗಳ ವಿರುದ್ಧ ಸ್ವಯಂ ಪ್ರೇರಿತ ಪ್ರಕರಣ ದಾಖಲಿಸಿಕೊಳ್ಳುವಂತೆ ಆದೇಶಿಸಿದ್ದಾರೆ.

ಅಧಿಕಾರಿ ಮತ್ತು ಸಿಬ್ಬಂದಿ ವರ್ತನೆಯು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 2(2)



(ಸಿ)ರ ಪರಿಭಾಷೆ ಭ್ರಷ್ಟಾಚಾರ, ಪಕ್ಷಪಾತ, ಸ್ವಜನಪಕ್ಷಪಾತ ಅಥವಾ ಸಾರ್ವಜನಿಕ ಸೇವಕನಾಗಿ ತನ್ನ ಸಾಮರ್ಥ್ಯದಲ್ಲಿ ಸಮಗ್ರತೆಯ ಕೊರತೆಯ ಅಪರಾಧಿಯ ವ್ಯಾಪ್ತಿಗೆ ಒಳಪಡುವುದರಿಂದ ಅದೇ ರೀತಿ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 2(5) ಪರಿಭಾಷೆ ಭ್ರಷ್ಟಾಚಾರ ಎಂದರೆ ಭಾರತೀಯ ದಂಡ ಸಂಹಿತೆಯ ಅಧ್ಯಾಯ 9 ಅಥವಾ ಭ್ರಷ್ಟಾಚಾರ ತಡೆ ಕಾಯ್ದೆ 1947ರಡಿಯಲ್ಲಿ ಶಿಕ್ಷಾರ್ಹವೆಂದು ಪರಿಗಣಿಸಲಾದ ಯಾವುದೇ ಕೃತ್ಯದ ವ್ಯಾಪ್ತಿಗೆ ಒಳಪಡುವುದರಿಂದ ಲೋಕಾಯುಕ್ತ ಕಾಯ್ದೆ 1984ರ ಕಲಂ 7(2) ಸಹವಾಚಕ ಕಲಂ 9(3)ರಡಿ ಪ್ರದತ್ತವಾದ ಅಧಿಕಾರ ಬಳಸಿ ಸ್ವಯಂಪ್ರೇರಿತ ಪ್ರಕರಣ ದಾಖಲಿಸುವಂತೆ ಆದೇಶಿಸಿದ್ದಾರೆ.

ಪೊಲೀಸರ ಬೇಜವಾಬ್ದಾರಿ, ದುರಾಡಳಿತ

ಇದರಲ್ಲಿ ಸಾರ್ವಜನಿಕ ಹಿತಾಸಕ್ತಿ ಇರುವುದರಿಂದ ತನಿಖೆ ಹಾಗೂ ವಿಚಾರಣೆಯ ಅವಶ್ಯಕತೆ ಇರುವುದು ಕಂಡುಬಂದಿದೆ. ಹಾಗಾಗಿ ಪೊಲೀಸ್ ಅಧಿಕಾರಿಗಳ ಉದಾಸೀನತೆಯಿಂದ ಮಕ್ಕಳು ಹಾಗೂ ಸಾರ್ವಜನಿಕರ ಪ್ರಾಣ, ಜೀವನ ಮತ್ತು ಗೌರವಯುತವಾಗಿ ಜೀವಿಸುವ ಹಕ್ಕನ್ನು ಕಳೆದುಕೊಳ್ಳುವಾಗಿದೆ. ಪೊಲೀಸ್ ಅಧಿಕಾರಿಗಳು, ಸಿಬ್ಬಂದಿಯ ಕರ್ತವ್ಯ ನಿರ್ಲಕ್ಷ್ಯತೆ, ಬೇಜವಾಬ್ದಾರಿತನ, ಉದಾಸೀನತೆ, ದುರಾಡಳಿತ ಹಾಗೂ ಕರ್ತವ್ಯ ಲೋಪವೆಸಗಿ ಸರ್ಕಾರಿ, ಸಾರ್ವಜನಿಕ ನೌಕರರ ಗೌರವ ತರದ ರೀತಿಯಲ್ಲಿ ನಡೆದುಕೊಂಡಿದ್ದಾರೆ. ಪರೋಕ್ಷವಾಗಿ ಪೊಲೀಸ್ ಅಧಿಕಾರಿಗಳು, ಸಿಬ್ಬಂದಿ ಭ್ರಷ್ಟಾಚಾರಕ್ಕೆ ಸಹಕರಿಸುತ್ತಿದ್ದಾರೆ. ಸರ್ಕಾರದ ಮತ್ತು ಸಾರ್ವಜನಿಕ ನಂಬಿಕಸ್ಥ ಅಧಿಕಾರಿಗಳು ಮತ್ತು ಸಿಬ್ಬಂದಿಗಳಾಗಿ ಉಳಿಯಲು ವಿಫಲರಾಗಿದ್ದಾರೆ ಎಂದು ಕಠಿಣ ಶಬ್ದಗಳಲ್ಲಿ ಉಪ ಲೋಕಾಯುಕ್ತರು ಹೇಳಿದ್ದಾರೆ.

ಪಟ್ಟಭದ್ರರ ಜೊತೆ ಪೊಲೀಸರು ಶಾಮೀಲು

ಶಾಲಾ-ಕಾಲೇಜುಗಳಿಗೆ ಹೋಗಬೇಕಾದ ಮಕ್ಕಳ ಕೈಯ್ಯಲ್ಲಿ ಗಾಂಜಾ, ಚರಸ್ ಮತ್ತು ಅಫೀಮುಗಳು ಕಂಡುಬರುತ್ತಿವೆ. ಈ ವಸ್ತುಗಳನ್ನು ಆಗಂತುಕರು ಕಾನೂನುಬಾಹಿರವಾಗಿ ಸರಬರಾಜು ಮಾಡುತ್ತಾ ಮಕ್ಕಳ ಜೀವನ ಹಾಳು ಮಾಡುತ್ತಿರುವುದು ಕಣ್ಮುಂದೆಯೇ ಕಂಡುಬಂದರೂ ಪೊಲೀಸ್ ಇಲಾಖೆಯವರು ಕಾನೂನು ಕ್ರಮ ಕೈಗೊಳ್ಳದೆ ಕರ್ತವ್ಯ ಲೋಪವೆಸಗಿದ್ದಾರೆ. ಪೊಲೀಸ್ ಇಲಾಖೆಯವರು ಕಾನೂನು ಕ್ರಮ ಕೈಗೊಳ್ಳದಿರುವುದನ್ನು ನೋಡಿದರೆ ಪಟ್ಟಭದ್ರ ಶಕ್ತಿಗಳೊಂದಿಗೆ ಕೈಜೋಡಿಸಿರುವುದು, ಅವರಿಂದ ಕಮಿಷನ್‌ಗಳನ್ನು ಪಡೆದು ಕರ್ತವ್ಯಲೋಪವೆಸಗಿರುವುದು ಕಂಡುಬಂದಿದೆ ಎಂದು ಚಾಟಿ ಬೀಸಿದ್ದಾರೆ.

ಯಾರೊಬ್ಬರ ವಿರುದ್ಧವೂ ಕ್ರಮವಿಲ್ಲ

ಶ್ರೀರಂಗಪಟ್ಟಣ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಪೆಡ್ಲರ್‌ಗಳು ಹಾಗೂ ಗಾಂಜಾ ತಯಾರು ಮಾಡುವವರ ವಿರುದ್ಧವೂ ಅಧಿಕಾರಿಗಳು ಯಾವುದೇ ಕ್ರಮ ಕೈಗೊಂಡಿಲ್ಲ. ಹಾಸ್ಟೆಲ್, ಕಾಲೇಜುಗಳಿಗೆ ಭೇಟಿ ನೀಡಿ ಮಾರಾಟ ಮಾಡುವವರು, ಡ್ರಗ್ಸ್ ದಂಧೆಯಲ್ಲಿ ತೊಡಗಿರುವವರ ವಿರುದ್ಧ ಯಾವುದೇ ಕ್ರಮ, ಪ್ರಕರಣ ದಾಖಲು ಮಾಡಿಲ್ಲ. ಈ ಕುರಿತು ಮಾಹಿತಿ ಸಂಗ್ರಹಿಸಿ ಮಾದಕ ವಸ್ತುಗಳ ಸೇವನೆ, ಪೂರೈಕೆ, ಮಾರಾಟ ಮಾಡುತ್ತಿರುವವರ ವಿರುದ್ಧ ಪ್ರಕರಣ ದಾಖಲಿಸಿ ಕಾನೂನು ಕ್ರಮ ಕೈಗೊಳ್ಳುವಂತೆ ಪೊಲೀಸ್ ನಿರೀಕ್ಷಕರಿಗೆ ಆದೇಶಿಸಿದ್ದಾರೆ.

ಲೋಕಾ ಕೇಳಿದ ವರದಿಯೇನು?

ಶ್ರೀರಂಗಪಟ್ಟಣ ತಾಲೂಕಿನ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಕಳೆದ 5 ವರ್ಷದಲ್ಲಿ ಎಷ್ಟು ಡ್ರಗ್ಸ್ ಸೇವನೆ ಪ್ರಕರಣಗಳು ದಾಖಲಾಗಿವೆ, ಎಷ್ಟು ಪ್ರಕರಣಗಳಲ್ಲಿ ಆರೋಪಿಗಳು ತಪ್ಪೊಪ್ಪಿಕೊಂಡಿದ್ದಾರೆ. ಗಂಜಾಂ ಗ್ರಾಮದ ವ್ಯಾಪ್ತಿಯಲ್ಲಿ ಡ್ರಗ್ಸ್ ನಿಯಂತ್ರಣಕ್ಕೆ ಯಾವ ಮುನ್ನೆಚ್ಚರಿಕೆ ವಹಿಸಲಾಗಿದೆ. ಎಷ್ಟು ಜಾಗೃತಿ ಕಾರ್ಯಕ್ರಮ ನಡೆಸಲಾಗಿದೆ. ಡ್ರಗ್ ಸೇವನೆ ಪ್ರಕರಣಗಳಲ್ಲಿ ಮಾದಕ ವ್ಯಸನಿಗಳಾಗಿರುವ ಮಕ್ಕಳು, ವಿದ್ಯಾರ್ಥಿಗಳು, ಸಾರ್ವಜನಿಕರಿಗೆ ಯಾವ ಸ್ಥಳದಲ್ಲಿ ಮಾದಕ ವ್ಯಸನ ಮುಕ್ತಿಗೆ ಚಿಕಿತ್ಸೆ ನೀಡಲಾಗುತ್ತಿದೆ. ಅವರ ಆರೋಗ್ಯದ ಕುರಿತ ವರದಿ.

ಗಂಜಾಂ ಗ್ರಾಮವನ್ನು ಹೊರತುಪಡಿಸಿ ಶ್ರೀರಂಗಪಟ್ಟಣ ತಾಲೂಕಿನ ವಿವಿಧ ಗ್ರಾಮಗಳಲ್ಲಿ ವಾಸವಾಗಿರುವ ಎಷ್ಟು ಮಕ್ಕಳು, ಸಾರ್ವಜನಿಕರು ಮಾದಕ ವ್ಯಸನಿಗಳಾಗಿದ್ದಾರೆ. ಪ್ರಸ್ತುತ ಆ ಮಕ್ಕಳು, ವಿದ್ಯಾರ್ಥಿಗಳು, ಸಾರ್ವಜನಿಕರು ಎಲ್ಲಿ ವಾಸವಿದ್ದಾರೆ, ಏನು ಮಾಡುತ್ತಿದ್ದಾರೆ, ಮಾದಕ ವ್ಯಸನ ಮುಕ್ತರಾಗಿದ್ದಾರೆಯೇ, ವಿದ್ಯಾರ್ಥಿಗಳು ವಿದ್ಯಾಭ್ಯಾಸ ಮುಂದುವರೆಸಿರುವರೇ. ಮಾದಕ ವ್ಯಸನಿಗಳ ಚಿಕಿತ್ಸೆಗೆ ತಗುಲಿರು ಮೊತ್ತ ಎಷ್ಟು. ಜಿಲ್ಲಾ ಸರ್ಕಾರಿ ಆಸ್ಪತ್ರೆಯಿಂದ ಮಾದಕ ವ್ಯಸನಿಗಳಿಗೆ ಯಾವ ಚಿಕಿತ್ಸೆಯನ್ನು ನೀಡಲಾಗಿದೆ. ಕಳೆದ ಮೂರು ವರ್ಷಗಳಲ್ಲಿ ವ್ಯಸನದಿಂದ ಮುಕ್ತರಾಗಿಸಲು ಚಿಕಿತ್ಸೆಗೆ ತಗುಲಿದ ವೆಚ್ಚವೆಷ್ಟು.

ಮೇ 31ರವರೆಗೆ ಆಸ್ತಿ ತೆರಿಗೆ ವಿನಾಯ್ತಿ ವಿಸ್ತರಣೆ

ಒಂದೇ ತಿಂಗಳಲ್ಲಿ ನಗರಸಭೆಯಿಂದ 5.70 ಕೋಟಿ ರು. ಸಂಗ್ರಹ | ಮೊದಲ ಬಾರಿಗೆ ಅನಧಿಕೃತ ಸ್ವತ್ತುಗಳಿಗೂ ತೆರಿಗೆ ವಿನಾಯ್ತಿ

• **ಕನ್ನಡಪ್ರಭ ವಾರ್ತೆ** ಮಂಡ್ಯ

ಸಾರ್ವಜನಿಕರಿಂದ ತೆರಿಗೆ ಪಾವತಿಗೆ ರಾಜ್ಯ ಸರ್ಕಾರ ನೀಡಿದ್ದ ಶೇ.5ರಷ್ಟು ವಿನಾಯ್ತಿಯನ್ನು ಮೇ ಅಂತ್ಯದವರೆಗೆ ವಿಸ್ತರಣೆ ಮಾಡಲಾಗಿದೆ. ತೆರಿಗೆ ಪಾವತಿ ಮಾಡುವ ಸಾರ್ವಜನಿಕರಿಗೆ ಅನುಕೂಲವಾಗುವಂತೆ ಏಪ್ರಿಲ್ 30ರ ವರೆಗೆ ಇದ್ದ ವಿನಾಯ್ತಿಯನ್ನು ಮೇ 31ರವರೆಗೆ ವಿಸ್ತರಿಸಲಾಗಿದೆ.

ಕಳೆದೊಂದು ತಿಂಗಳಲ್ಲಿ ನಗರಸಭೆಗೆ ವಸತಿ ಮತ್ತು ವಾಣಿಜ್ಯ ತೆರಿಗೆ 5.70 ಕೋಟಿ ರು. ಸಂಗ್ರಹವಾಗಿದೆ. ರಾಜ್ಯ ಸರ್ಕಾರದ ತೆರಿಗೆ ವಿನಾಯ್ತಿ ಅವಧಿ ವಿಸ್ತರಣೆಯಿಂದ ಮೇ ತಿಂಗಳಿನಲ್ಲೂ 5 ರಿಂದ 6 ಕೋಟಿ ರು. ತೆರಿಗೆ ಸಂಗ್ರಹವಾಗಬಹುದೆಂದು ನಿರೀಕ್ಷಿಸಲಾಗಿದೆ.

2025-26ನೇ ಸಾಲಿನಲ್ಲಿ ನಗರಸಭೆ ತೆರಿಗೆ ಸಂಗ್ರಹದಲ್ಲಿ ಗುರಿ ಮೀರಿದ ಸಾಧನೆಮಾಡಿತ್ತು. ನಗರವ್ಯಾಪ್ತಿಯಲ್ಲಿರುವ ಆಸ್ತಿಗಳಿಂದ ತೆರಿಗೆ ಸಂಗ್ರಹದ ಒಟ್ಟು ಬೇಡಿಕೆ 18.85 ಕೋಟಿ ರು. ಇದ್ದರೂ, 19.23 ಕೋಟಿ ರು. ವಸೂಲಿ ಮಾಡುವುದರೊಂದಿಗೆ ಶೇ.102ರಷ್ಟು ಪ್ರಗತಿ ಸಾಧಿಸಿತ್ತು.

ನಗರ ವ್ಯಾಪ್ತಿಯೊಳಗೆ 24, 539 ವಸತಿ, 2575 ವಾಣಿಜ್ಯ ಹಾಗೂ 6546 ಖಾಲಿ ನಿವೇಶನ ಸೇರಿ 33,660 ಒಟ್ಟು ಆಸ್ತಿಗಳಿವೆ. ಇದರಲ್ಲಿ ವಸತಿಯಿಂದ 13.6 ಕೋಟಿ ರು., ವಾಣಿಜ್ಯದಿಂದ 5.23 ಕೋಟಿ ರು. ಹಾಗೂ ಖಾಲಿ ನಿವೇಶನದಿಂದ 40 ಲಕ್ಷ ರು. ಸೇರಿ 19.23 ಕೋಟಿ



ರು. ಕರ ಸಂಗ್ರಹಿಸುವ ಮೂಲಕ ದಾಖಲೆಯನ್ನು ಬರೆದಿತ್ತು.

2026-27ನೇ ಸಾಲಿನಲ್ಲಿ ಆಸ್ತಿ ತೆರಿಗೆಯನ್ನು ವಾಸದ ಕಟ್ಟಡಗಳಿಗೆ ಶೇ.4ರಷ್ಟು, ವಾಣಿಜ್ಯ ಮತ್ತು ಕೈಗಾರಿಕಾ ಕಟ್ಟಡಗಳಿಗೆ ಶೇ.5 ಹಾಗೂ ಖಾಲಿ ನಿವೇಶನಗಳಿಗೆ ಶೇ.3ರಷ್ಟು ತೆರಿಗೆಯನ್ನು ಸರ್ಕಾರದ ನಿರ್ದೇಶನದಂತೆ ಹೆಚ್ಚಿಸಲಾಗಿದೆ. ಇದರ ನಡುವೆಯೂ ಸಾರ್ವಜನಿಕರು ತೆರಿಗೆ ಪಾವತಿಗೆ ಹೆಚ್ಚಿನ ಉತ್ಸಾಹ ತೋರುತ್ತಿದ್ದಾರೆ. ಬಾಕಿ ಉಳಿಸಿಕೊಂಡರೆ ಬಡ್ಡಿ ಪಾವತಿಸಬೇಕಾಗಬಹುದೆಂಬ ಭಯದಿಂದ ತೆರಿಗೆ ಪಾವತಿಸಿ ದಂಡದಿಂದ ಪಾರಾಗುತ್ತಿದ್ದಾರೆ.

ಮೊದಲ ಬಾರಿಗೆ ವಿನಾಯ್ತಿ: ಅನಧಿಕೃತ ಸ್ವತ್ತುಗಳಿಗೆ ಇದೇ ಮೊದಲ ಬಾರಿಗೆ ರಾಜ್ಯ ಸರ್ಕಾರ ಶೇ.5ರಷ್ಟು ವಿನಾಯ್ತಿ ನೀಡಿದೆ. ಈವರೆಗೆ ಅಧಿಕೃತ ಕಟ್ಟಡಗಳಿಗೆ ಮಾತ್ರ ಶೇ.5ರಷ್ಟು ತೆರಿಗೆ ವಿನಾಯ್ತಿ ಅನುಕೂಲ ದೊರಕುತ್ತಿತ್ತು. ಜೊತೆಗೆ ರಾಜ್ಯ ಸರ್ಕಾರ ಅನಧಿಕೃತ ಕಟ್ಟಡಗಳನ್ನು ಬಿ-ಖಾತೆಗೆ ಸೇರಿಸುವಂತೆ ಆದೇಶ ಹೊರಡಿಸಿರುವುದರಿಂದ ಅದರ ಮೇಲೆ ಬೀಳುತ್ತಿದ್ದ ಹೆಚ್ಚುವರಿ ಬಡ್ಡಿ ಹೊರೆಯೂ ಜನರಿಗೆ ಕಡಿಮೆಯಾಗಲಿವೆ. ಅದರಿಂದಲೂ ಜನರಿಗೆ ವಿನಾಯ್ತಿ ಸಿಗಲಿದೆ



ರಾಜ್ಯ ಸರ್ಕಾರ ತೆರಿಗೆ ವಿನಾಯ್ತಿಯ ಅವಧಿಯನ್ನು ಮೇ ಅಂತ್ಯದವರೆಗೆ ವಿಸ್ತರಿಸಿದೆ. ಇದರಿಂದ ತೆರಿಗೆ ಪಾವತಿದಾರರಿಗೆ ಹೆಚ್ಚಿನ ಅನುಕೂಲವಾಗಲಿದೆ. ಅನಧಿಕೃತ ಕಟ್ಟಡಗಳನ್ನು ಬಿ-ಖಾತೆಗೆ ಸೇರಿಸುವಂತೆ ಸರ್ಕಾರ ಆದೇಶಿಸಿರುವುದರಿಂದ ಹೆಚ್ಚುವರಿ ಬಡ್ಡಿಯ ಹೊರೆಯೂ ಕಡಿಮೆಯಾಗಲಿದೆ. ಶೇ.5ರಷ್ಟು ತೆರಿಗೆ ವಿನಾಯ್ತಿಯಿಂದ ಏಪ್ರಿಲ್ ತಿಂಗಳಿನಲ್ಲಿ 5.70 ಕೋಟಿ ರು. ತೆರಿಗೆ ಸಂಗ್ರಹವಾಗಿದೆ. ಅನಧಿಕೃತ ಸ್ವತ್ತುಗಳಿಗೆ ಇದೇ ಮೊದಲ ಬಾರಿಗೆ ಶೇ.5ರಷ್ಟು ರಿಯಾಯ್ತಿ ನೀಡಲಾಗಿದೆ. ಸಾರ್ವಜನಿಕರು ಸದುಪಯೋಗ ಪಡೆದು ಸಕಾಲದಲ್ಲಿ ತೆರಿಗೆ ಪಾವತಿಸಿ, ಅಭಿವೃದ್ಧಿಗೆ ಸಹಕರಿಸಿ.

• **ಯು.ಪಿ.ಪಂಪಾಶ್ರೀ** ಆಯುಕ್ತರು, ಮಂಡ್ಯ

ಹಾಗೂ ಸರ್ಕಾರ ಶೇ.5ರಷ್ಟು ತೆರಿಗೆ ವಿನಾಯ್ತಿಯನ್ನು ಒಂದು ತಿಂಗಳವರೆಗೆ ವಿಸ್ತರಣೆ ಮಾಡಿರುವುದರಿಂದ ತೆರಿಗೆ ಹೊರೆ ಕಡಿಮೆಯಾಗುವುದರಿಂದ ಸಾರ್ವಜನಿಕರು ತೆರಿಗೆ ಪಾವತಿಗೆ ಇನ್ನೂ ಹೆಚ್ಚಿನ ಉತ್ಸಾಹ ತೋರುವ ಸಾಧ್ಯತೆಗಳಿವೆ.

ತೆರಿಗೆಪಾವತಿ ಸಂಬಂಧ ಸಾರ್ವಜನಿಕರಲ್ಲಿ ಜಾಗೃತಿ ಹೆಚ್ಚಿರುವುದರಿಂದ ತೆರಿಗೆ ಪಾವತಿಗೆ ಹಿಂದೆಂದಿಗಿಂತಲೂ ಈಗ ಹೆಚ್ಚಿನ ಉತ್ಸಾಹ ತೋರುತ್ತಿದ್ದಾರೆ. ನಗರಸಭೆಯ ಎಚ್‌ಡಿಎಫ್‌ಸಿ ಬ್ಯಾಂಕಿನ ಪಕ್ಕದಲ್ಲಿ ತೆರಿಗೆ ಪಾವತಿಗೆ ಜನರು ಕ್ಯೂ ನಿಲ್ಲುತ್ತಿರುವುದು ಕಂಡುಬರುತ್ತಿದೆ. ಇದಕ್ಕಾಗಿ ಪ್ರತ್ಯೇಕ ಕೌಂಟರ್‌ನ್ನೇ ತೆರೆದು ತೆರಿಗೆ ಪಾವತಿಸಲು ಬರುವ ಜನರಿಗೆ ಅನುಕೂಲ ಕಲ್ಪಿಸಲಾಗಿದೆ.

ಎಷ್ಟೋ ವರ್ಷಗಳಿಂದ ತೆರಿಗೆ ಪಾವತಿಸದವರೂ ಕೂಡ ಇತರರು ತೆರಿಗೆ ಪಾವತಿಸುತ್ತಿರುವುದನ್ನು ಕಂಡು ತಾವೂ ಕೂಡ ತೆರಿಗೆ ಪಾವತಿಸುವ ಮೂಲಕ ಆರ್ಥಿಕ ಹೊರೆಯಿಂದ ತಪ್ಪಿಸಿಕೊಳ್ಳುವುದಕ್ಕೆ ಮುಂದಾಗುತ್ತಿದ್ದಾರೆ. ಸಾಮಾನ್ಯವಾಗಿ ಪ್ರತಿ ವರ್ಷವೂ ರಾಜ್ಯ ಸರ್ಕಾರ ಶೇ.5ರಷ್ಟು ತೆರಿಗೆ ವಿನಾಯ್ತಿಯನ್ನು ಏಪ್ರಿಲ್ ತಿಂಗಳಿಗಷ್ಟೇ ಸೀಮಿತಗೊಳಿಸುತ್ತಿತ್ತು. ಈ ಬಾರಿ ಮೇ ಅಂತ್ಯದವರೆಗೆ ವಿಸ್ತರಿಸಿದೆ. ಎರಡು ಅಥವಾ ಮೂರು ವರ್ಷಗಳಿಗೊಮ್ಮೆ ಈ ರೀತಿಯ ವಿನಾಯ್ತಿಯನ್ನು ಎರಡು ತಿಂಗಳ ಅವಧಿಗೆ ವಿಸ್ತರಿಸಿರುವ ನಿದರ್ಶನಗಳಿವೆ. ತೆರಿಗೆ ಪಾವತಿಗೆ ಸಾರ್ವಜನಿಕರು ಹೆಚ್ಚಿನ ಮಹತ್ವ ನೀಡುವುದರೊಂದಿಗೆ ಅಭಿವೃದ್ಧಿಗೆ ಸಹಕಾರಿಯಾಗಿ ನಿಲ್ಲಬೇಕೆಂಬುದು ಸರ್ಕಾರದ ಉದ್ದೇಶವಾಗಿದೆ.

ಹಳ್ಳಿಗಳಲ್ಲಿ ನಿರ್ಮಿಸುವ ಮಹಾದ್ವಾರಗಳು ನಮ್ಮ ಸಂಸ್ಕೃತಿಯ ಪ್ರತೀಕ: ಸಿಆರ್‌ಎಸ್



ನಾಗಮಂಗಲ ತಾಲೂಕಿನ ತುಪ್ಪದಮಡು ಗ್ರಾಮದ ಪ್ರವೇಶದಲ್ಲಿ ನೂತನ ಮಹಾದ್ವಾರವನ್ನು ಸಚಿವ ಚಲುವರಾಯಸ್ವಾಮಿ ಉದ್ಘಾಟಿಸಿದರು.

• **ಕನ್ನಡಪ್ರಭ ವಾರ್ತೆ** ನಾಗಮಂಗಲ

ಹಳ್ಳಿಗಳಲ್ಲಿ ನಿರ್ಮಿಸುವ ಮಹಾದ್ವಾರಗಳು ನಮ್ಮ ಸಂಸ್ಕೃತಿಯ ಪ್ರತೀಕವಾಗಿರುತ್ತವೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ ಅಭಿಪ್ರಾಯಪಟ್ಟರು.

ತಾಲೂಕಿನ ತುಪ್ಪದಮಡು ಗ್ರಾಮದ ಪ್ರವೇಶದಲ್ಲಿ ನೂತನವಾಗಿ ನಿರ್ಮಿಸಿರುವ ಮಹಾದ್ವಾರವನ್ನು ಉದ್ಘಾಟಿಸಿ ಮಾತನಾಡಿದ ಸಚಿವರು, ನಮ್ಮ ಪೂರ್ವಿಕರು ನಡೆಸುತ್ತಿದ್ದ ಧಾರ್ಮಿಕ ಪರಂಪರೆ ಇಂದಿಗೂ ಕೂಡ ಉಳಿದಿರುವುದು ಹಳ್ಳಿಗಳಲ್ಲಿ ಮಾತ್ರ ಎಂದರು.

ತುಪ್ಪದಮಡು ಗ್ರಾಮಸ್ಥರು ಬಹುವರ್ಷಗಳಿಂದಲೂ ನನ್ನ ಮೇಲೆ ಅಪಾರ ಪ್ರೀತಿ ವಿಶ್ವಾಸ ಹೊಂದಿದ್ದಾರೆ. ಚುನಾವಣೆಯಲ್ಲಿ ಅತ್ಯಧಿಕ ಮತಗಳನ್ನು ಕೊಟ್ಟು ಹೆಚ್ಚು ಶಕ್ತಿ ತುಂಬಿದ್ದಾರೆ. ಅಂತಹ ಜನರ ಋಣ ತೀರಿಸುವ ಸಲುವಾಗಿ ಗ್ರಾಮಕ್ಕೆ ರಸ್ತೆ ಚರಂಡಿ, ಎಸ್ಸಿ, ಎಸ್ಟಿ ಹಾಗೂ ವೀರಶೈವ ಸಮಾಜದ ಜನರ ಅನುಕೂಲಕ್ಕಾಗಿ ಪ್ರತ್ಯೇಕ ಸಮುದಾಯಭವನ ಸೇರಿದಂತೆ ಎಲ್ಲಾ ರೀತಿಯ ಮೂಲ ಸೌಕರ್ಯ ಕಲ್ಪಿಸಿಕೊಟ್ಟಿದ್ದೇನೆ ಎಂದರು.

ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಪ್ರತಿ ಹಳ್ಳಿಗಳೂ ಸಹ ಸರ್ವತೋಮುಖ ಅಭಿವೃದ್ಧಿಯಾಗಬೇಕೆಂಬ ಉದ್ದೇಶ ನನ್ನದಾಗಿದೆ. ಕಳೆದ 3 ವರ್ಷದಿಂದ ಜನರ ನಿರೀಕ್ಷೆಗೂ ಮೀರಿ ತಾಲೂಕಿನಲ್ಲಿ ಇಷ್ಟೊಂದು ಅಭಿವೃದ್ಧಿ ಕೆಲಸ ಕಾರ್ಯಗಳನ್ನು ಮಾಡುತ್ತಿದ್ದೇನೆ. ಜನರು ಇದನ್ನು ಅರ್ಥೈಸಿಕೊಂಡು ಮುಂಬರುವ ಯಾವುದೇ ಚುನಾವಣೆಗಳಲ್ಲಿ ಅಭಿವೃದ್ಧಿ ಕೆಲಸ ಮಾಡುವ ಇಚ್ಛಾಶಕ್ತಿ ಹಾಗೂ ಜನಪರ ಕಾಳಜಿ ಇರುವ ವ್ಯಕ್ತಿಗಳನ್ನು ಬೆಂಬಲಿಸಿ ಆಶೀರ್ವದಿಸಬೇಕು ಎಂದರು.

ಗ್ರಾಮಕ್ಕೆ ಭೇಟಿ ಕೊಟ್ಟ ಸಚಿವ ಎನ್. ಚಲುವರಾಯಸ್ವಾಮಿ ಅವರಿಗೆ ಊರಿನ ಮಹಿಳೆಯರು ಮತ್ತು ಹೆಣ್ಣುಮಕ್ಕಳು ತಂಬಿಟ್ಟು ಹಾಗೂ ಬೆಲ್ಲದಾರತಿಯೊಂದಿಗೆ ಅದ್ಧೂರಿ ಸ್ವಾಗತ ಕೋರಿ ಬರಮಾಡಿಕೊಂಡರು.

ನಂತರ ತಾಲೂಕಿನ ಪಡುವಲಪಟ್ಟಣ ಗ್ರಾಮದಿಂದ ಶ್ರೀಕಾನನಬ್ರಹ್ಮದೇವರ ದೇವಸ್ಥಾನದವರೆಗೆ 3 ಕೋಟಿ ರು.ವೆಚ್ಚದ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿದ ಸಚಿವರು, ಹೊಸೂರುಕೊಪ್ಪಲು, ಗಂಗನಹಳ್ಳಿ, ಉಯ್ಯನಹಳ್ಳಿ, ಮುದ್ದನಹಳ್ಳಿ, ವಡ್ಡರಹಟ್ಟಿ, ಅಣೆಚನ್ನಾಪುರ ಹಾಗೂ ವರಹಾಸಂದ್ರ ಗ್ರಾಮಗಳಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಚಾಲನೆ ನೀಡಿದರು.

ಈ ವೇಳೆ ತಹಸೀಲ್ದಾರ್‌ಜಿ.ಆದರ್ಶ, ತಾಪಂ ಇಒ ಸತೀಶ್, ಕೆಆರ್‌ಐಡಿಎಲ್ ಎಇಇ ಚೈತ್ರ, ಜೆಇ ಶರತ್, ಜಿಪಂ ಮಾಜಿ ಸದಸ್ಯ ಎಂ.ಪ್ರಸನ್ನ, ಗ್ರಾಪಂ ಮಾಜಿ ಅಧ್ಯಕ್ಷ ಎಂ.ರಾಘವೇಂದ್ರ, ಟಿಎಪಿಸಿಎಂಎಸ್ ಉಪಾಧ್ಯಕ್ಷ ಧನರಾಜ್, ಮಾಜಿ ಅಧ್ಯಕ್ಷೆ ಚಿಕ್ಕಮ್ಮ, ತಾಪಂ ಮಾಜಿ ಸದಸ್ಯ ಲಕ್ಷ್ಮಿನಾರಾಯಣಪ್ಪ, ಸುನಿಲ್ ಲಕ್ಷ್ಮಿಕಾಂತ್, ನೂತನ್‌ಗೌಡ, ಅಣೆಚನ್ನಾಪುರ ಮಂಜೇಶ್, ಎಸ್.ಬಿ.ರಮೇಶ್, ಪಿ.ಜೆ.ಜಯರಾಂ, ಸಂಪತ್‌ಕುಮಾರ್ ಇದ್ದರು.



ತೆರಿಗೆ ವಸೂಲಾತಿಯಲ್ಲಿ ಸಾಧನೆ: ಸಚಿವರಿಂದ ಅಭಿನಂದನೆ

• **ಕನ್ನಡಪ್ರಭ ವಾರ್ತೆ** ಪಾಂಡವಪುರ

ತಾಲೂಕಿನ 24 ಗ್ರಾಮ ಪಂಚಾಯ್ತಿಗಳು 2025-26ನೇ ಸಾಲಿನಲ್ಲಿ ತೆರಿಗೆ ವಸೂಲಾತಿಯಲ್ಲಿ ಶೇ.108 ರಷ್ಟು ಸಾಧನೆ ಮಾಡುವ ಮೂಲಕ ಜಿಲ್ಲೆಗೆ ಪ್ರಥಮ ಸ್ಥಾನಗಳಿಸಿದ ಹಿನ್ನೆಲೆಯಲ್ಲಿ ಮಂಡ್ಯದಲ್ಲಿ ನಡೆದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಜಿಲ್ಲಾ ಪಂಚಾಯ್ತಿವತಿಯಿಂದ ತಾಲೂಕಿನ ಪಿಡಿಒ, ಕಾರ್ಯದರ್ಶಿ ಹಾಗೂ ಬಿಲ್ ಕಲೆಕ್ಟರ್‌ಗಳ ಕೆಲಸ ಪ್ರಸಂಶಿಸಿ ತಾಲೂಕಿನ ಪರ ತಾಪಂ ಇಒ ಎಂ.ಎಸ್.ವೀಣಾ ಅವರಿಗೆ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಅವರು ಅಭಿನಂದನ ಪತ್ರ ನೀಡಿ ಗೌರವ ಸಲ್ಲಿಸಿದರು. ಸೆಸ್ಕ್ ಅಧ್ಯಕ್ಷ ರಮೇಶ್ ಬಂಡಿಸಿದ್ದೇಗೌಡ, ಶಾಸಕರಾದ ದರ್ಶನ್ ಪುಟ್ಟಣ್ಣಯ್ಯ, ಎಚ್.ಟಿ.ಮಂಜು, ಪಿರವಿ ಕುಮಾರ್, ಎಂಎಲ್‌ಸಿ ದಿನೇಶ್‌ಗೂಳಿಗೌಡ, ಜಿಲ್ಲಾಧಿಕಾರಿ ಡಾ.ಕುಮಾರ್, ಸಿಇಒ ನಂದಿನಿ ಹಾಗೂ ಕಂದಾಯ ಇಲಾಖೆ ಅಧಿಕಾರಿಗಳು ಇದ್ದರು.

ದಾಖಲೆಗಳ ಪರಿಶೀಲನೆ | **ಭ್ರೂಣ ಲಿಂಗ ಪತ್ತೆ-ಹತ್ಯೆ ಪ್ರಕರಣ ಹೆಚ್ಚಳ ಹಿನ್ನೆಲೆ ತಹಸೀಲ್ದಾರ್ ನೇತೃತ್ವದಲ್ಲಿ ದಾಳಿ**

ಡಯಾಗ್ನೋಸ್ಟಿಕ್ ಸೆಂಟರ್‌ಗಳಿಗೆ ಜಾಗೃತ ದಳ ಭೇಟಿ

• **ಕನ್ನಡಪ್ರಭ ವಾರ್ತೆ** ಮದ್ದೂರು

ಭ್ರೂಣಲಿಂಗ ಪತ್ತೆ ಮತ್ತು ಹತ್ಯೆ ಪ್ರಕರಣಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ನಗರ ಹಾಗೂ ತಾಲೂಕು ವ್ಯಾಪ್ತಿಯ ವಿವಿಧ ಖಾಸಗಿ ಡಯಾಗ್ನೋಸ್ಟಿಕ್ ಸೆಂಟರ್‌ಗಳಿಗೆ ಜಾಗೃತ ದಳ ಧಿಡೀರ್ ಭೇಟಿ ದಾಖಲೆಗಳನ್ನು ಪರಿಶೀಲಿಸಿದರು.

ಜಿಲ್ಲಾಧಿಕಾರಿಗಳ ಸೂಚನೆ ಮೇರೆಗೆ ತಾಲೂಕು ಹೆಣ್ಣು ಭ್ರೂಣ ಹತ್ಯೆ ತಡೆ ಜಾಗೃತ ದಳ ತಂಡ ತಾಲೂಕಿನ ಐದು ಖಾಸಗಿ ಡಯಾಗ್ನೋಸ್ಟಿಕ್ ಸೆಂಟರ್‌ಗಳಿಗೆ ತಹಸೀಲ್ದಾರ್‌ನೇತೃತ್ವದ ತಂಡ ದಿಢೀರ್ ಭೇಟಿ ನೀಡಿ ಹಲವು ಕಡತಗಳನ್ನು ಪರಿಶೀಲಿಸಿ ಮಹಿಳೆಯರ ಪ್ರಸವಕ್ಕೆ ಯಾವ ದಾಖಲೆಗಳನ್ನು ನೀಡಿದ್ದಾರೆ ಎಂಬ ಮಾಹಿತಿ ಪಡೆದಕೊಂಡರು.

